ಸಂಪುಟ : 9 ಸಂಚಿಕೆ 274 ಪುಟ : 4 ಬೆಲೆ: 3.00 ಗುರುವಾರ ಡಿಸೆಂಬರ್ 12 2024 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ...

VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 9 Issue : 274 Pages : 4 Price : 3.00 Thursday December 12 2024 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ಶ್ರೀ ಸತ್ಯಾತ್ಮತೀರ್ಥ ಶ್ರೀಗಳಿಂದ ಪ್ರವಚನ ಕಾರ್ಯಕ್ರಮ

■ವಿಜಯಸಾಕ್ಷಿ ಸುದ್ದಿ, ಗದಗ



ಶ್ರೀ ಮದುತ್ತರಾದಿ ಮಠಾಧೀಶರಾದ ಪೂಜ್ಯ ಶ್ರೀಶ್ರೀ 1008 ಶ್ರೀ ಸತ್ಯಾತ್ಮತೀರ್ಥ ಶ್ರೀಪಾದಂಗಳವರಿಂದ ಡಿ.16ರಿಂದ 18ರವರೆಗೆ ಗದಗ ನಗರದ ಶ್ರೀ ವೀರನಾರಾಯಣ ದೇವಸ್ಥಾನದಲ್ಲಿ ಪ್ರವಚನ ಕಾರ್ಯಕ್ರಮ ನಡೆಯಲಿದೆ.

ಡಿ. 16ರ ಬೆಳಿಗ್ಗೆ 7.30ಕ್ಕೆ ಶ್ರೀಗಳ ಪಾದಪೂಜೆ ಹಾಗೂ ತಪ್ತಮುದ್ರಾಧಾರಣ, 12ಕ್ಕೆ ಶ್ರೀ ಮೂಲರಾಮ ದಿಗ್ವಿಜಯರಾಮ ದೇವರ ಪೂಜೆ, ಸಾಯಂಕಾಲ 6ಕ್ಕೆ ವಿದ್ವಾಂಸರಿಂದ ಉಪನ್ಯಾಸ, ನಂತರ ಪೂಜ್ಯ ಶ್ರೀಪಾದಂಗಳವರಿಂದ ಅಮೃತೋಪದೇಶ ಜರುಗುವುದು.

ಡಿ. 17ರ ಬೆಳಿಗ್ಗೆ 7.30ಕ್ಕೆ ಗದಗ ನಗರದ ಕರಿಯಮ್ಮನಕಲ್ಲು ಬಡಾವಣೆಯ ಶ್ರೀ ರಾಘವೇಂದ್ರ ಸ್ವಾಮಿಗಳವರ ಮಠದಲ್ಲಿ ಪಾದಪೂಜಾ ಹಾಗೂ ತಪ್ತಮುದ್ರಾಧಾರಣ ನೆರವೇರುವುದು. ಸಾಯಂಕಾಲ 6ಕ್ಕೆ ಶ್ರೀ ವೀರನಾರಾಯಣ ದೇವಸ್ಥಾನದಲ್ಲಿ ವಿದ್ವಾಂಸರ ಉಪನ್ಯಾಸ ನಂತರ ಪೂಜ್ಯ ಶ್ರೀಪಾದಂಗಳವರಿಗೆ ಗೌರವ ಸಮರ್ಪಣೆ, ಪೂಜ್ಯ ಮಹಾಸ್ವಾಮಿಗಳವರ ಅಮೃತೋಪದೇಶ ಜರುಗುವುದು.

ಕಾರಣ ಈ ಎಲ್ಲ ಕಾರ್ಯಕ್ರಮಗಳಲ್ಲಿ ಸದ್ಭಕ್ತರು ಸಕ್ರಿಯವಾಗಿ ಪಾಲ್ಗೊಂಡು ಶ್ರೀ ಮೂಲರಾಮ, ದಿಗ್ವಿಜಯರಾಮ ದೇವರ ಹಾಗೂ ಶ್ರೀಪಾದಂಗಳವರ ಅನುಗ್ರಹಕ್ಕೆ ಪಾತ್ರರಾಗುವಂತೆ ಶ್ರೀ ಸತ್ಯಾತ್ಮತೀರ್ಥ ಶ್ರೀಪಾದಂಗಳವರ ಸ್ವಾಗತ ಸಮಿತಿಯ ಪ್ರಕಟಣೆ ಕೋರಿದೆ.

## ಪಂಚಮಸಾಲಿ ಹೋರಾಟಗಾರರ ಮೇಲೆ ಲಾಠಿಚಾರ್ಜ್ ಲಕ್ಷ್ಮೇಶ್ವರದಲ್ಲಿ ಇಂದು ಪ್ರತಿಭಟನೆ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಮಂಗಳವಾರ ಬೆಳಗಾವಿ ನಗರದಲ್ಲಿ ಪಂಚಮಸಾಲಿ 2ಎ ಮೀಸಲಾತಿಗಾಗಿ ನಡೆದ ಹೋರಾಟದಲ್ಲಿ ಪಾಲ್ಗೊಂಡ ಅಮಾಯಕ ಪಂಚಮಸಾಲಿ ಜನರ ಮೇಲೆ ರಾಜ್ಯ ಸರಕಾರವು ಪೊಲೀಸರಿಂದ ಲಾಠಿ ಚಾರ್ಜ್ ಮಾಡಿಸುವ ಮೂಲಕ ಹಲ್ಲೆ ಮಾಡಿರುವದನ್ನು ಖಂಡಿಸಿ ಡಿ.12ರ ಮುಂಜಾನೆ 9.30 ಗಂಟೆಗೆ ವೀರಶೈವ ಲಿಂಗಾಯತ ಪಂಚಮಸಾಲಿ ಸಮಾಜದವರಿಂದ ಪ್ರತಿಭಟನೆಯನ್ನು ಹಮ್ಮಿಕೊಳ್ಳಲಾಗಿದೆ.

ಪಟ್ಟಣದ ಹಾವಳಿ ಆಂಜನೇಯ ದೇವಸ್ಥಾನದಿಂದ ಮುಖ್ಯ ಬಜಾರ್ ಮಾರ್ಗವಾಗಿ ಪ್ರತಿಭಟನಾ ಮೆರವಣಿಗೆ ಮೂಲಕ ಸಾಗಿ ಪಾಳಾ-ಬದಾಮಿ ರಾಜ್ಯ ಹೆದ್ದಾರಿ ತಡೆದು ರಾಜ್ಯ ಸರಕಾರದ ವಿರುದ್ಧ ಪ್ರತಿಭಟನೆ ನಡೆಸಲಾಗುವದು. ಸಮಾಜ ಭಾಂಧವರು ಪಕ್ಷಾತೀತವಾಗಿ ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು ಪ್ರತಿಭಟನೆಯನ್ನು ಯಶಸ್ವಿಗೊಳಿಸಬೇಕಾಗಿ ವೀರಶೈವ ಲಿಂಗಾಯತ ಪಂಚಮಸಾಲಿ ಸಂಘದ ತಾಲೂಕಾಧ್ಯಕ್ಷ ಮಂಜುನಾಥ ಮಾಗಡಿ ಹಾಗೂ ಸದಸ್ಯರು ವಿನಂತಿಸಿದ್ದಾರೆ.

### ಸ್ಥಳದಲ್ಲೇ ಬಿಡಾರ ಹೂಡಿದ ಸಂಗನಗೌಡ ಪಾಟೀಲ । ಸಾಥ್ ನೀಡಿದ ಅಧಿಕಾರಿಗಳು

# ಸಿಎಂ ಕಾರ್ಯಕ್ರಮಕ್ಕೆ ಭರದ ಸಿದ್ಧತೆ

■ವಿಜಯಸಾಕ್ಷಿ ಸುದ್ದಿ, ರೋಣ

ಡಿ.15ರಂದು ರೋಣ ಮತಕ್ಷೇತ್ರದ 200 ಕೋಟಿ ರೂಗಳ ಅಭಿವೃದ್ಧಿ ಕಾರ್ಯಕ್ರಮಗಳ ಶಂಕುಸ್ಥಾಪನೆ ಕಾರ್ಯಕ್ರಮಕ್ಕೆ ಸಿಎಂ ಸಿದ್ದರಾಮಯ್ಯ ಆಗಮಿಸುತ್ತಿರುವ ಹಿನ್ನೆಲೆಯಲ್ಲಿ ಪುರಸಭಾ ಸದಸ್ಯ ಸಂಗನಗೌಡ ಪಾಟೀಲ ಸ್ಥಳದಲ್ಲಿಯೇ ಬಿಡಾರ ಹೂಡಿದ್ದು, ಸಮಾವೇಶದ ಯಶಸ್ವಿಗೆ ಶ್ರಮಿಸುತ್ತಿದ್ದಾರೆ. ಬುಧವಾರ ಬೆಳಗಿನ ಜಾವ ಪುರಸಭಾ ಸದಸ್ಯ ಸಂಗನಗೌಡ ಪಾಟೀಲ ಸಮಾವೇಶ ಜರುಗುವ ಸ್ಥಳಕ್ಕೆ ಭೇಟಿ ನೀಡಿ, ಸಿದ್ಧತೆಯನ್ನು ವೀಕ್ಷಿಸಿದರು. ಈ ಸಂದರ್ಭದಲ್ಲಿ ತಹಸೀಲ್ದಾರ್ ನಾಗರಾಜ ಕೆ., ಲೋಕೋಪಯೋಗಿ ಇಲಾಖೆಯ ಇಇ ಬಲರಾಮ್ ನಾಯಕ ಸ್ಥಳದಲ್ಲಿದ್ದು ಅವರಿಗೆ ಸಾಥ್ ನೀಡಿದರು. ಈಗಾಗಲೇ ಬೃಹತ್ ಶಾಮಿಯಾನ ಹಾಕುವ ಕಾರ್ಯ ಮುಕ್ತಾಯದ ಹಂತಕ್ಕೆ ಬಂದಿದ್ದು, ಇದನ್ನು ವೀಕ್ಷಿಸಿದ ಸದಸ್ಯ ಸಂಗನಗೌಡ ಪಾಟೀಲ ಸಮಾವೇಶಕ್ಕೆ ಆಗಮಿಸುವ ಜನರಿಗೆ ಕುಡಿಯುವ ನೀರಿನ ತೊಂದರೆಯಾಗಬಾರದು ಎಂಬ ದೃಷ್ಟಿಯಿಂದ ಅಧಿಕಾರಿಗಳೊಂದಿಗೆ ಚರ್ಚಿಸಿ, ಸಮಾವೇಶದ ಸ್ಥಳದಲ್ಲಿ ನೀರಿನ ವ್ಯವಸ್ಥೆಯಾಗಬೇಕು ಎಂದರು. ಮುಖ್ಯಮಂತ್ರಿಗಳು ಡಿ ಪೌಲ್ ಶಾಲೆ ಆವರಣದಲ್ಲಿ ನಿರ್ಮಿಸಲಾದ ಹೆಲಿಪ್ಯಾಡ್‌ನಿಂದ ಸಮಾವೇಶದ ಸ್ಥಳಕ್ಕೆ ಆಗಮಿಸಲಿದ್ದಾರೆ. ಸಾರ್ವಜನಿಕರ ಪ್ರವೇಶಕ್ಕೆ ಕ್ರೀಡಾಂಗಣದ ಮುಖ್ಯ ದ್ವಾರವನ್ನು ಬಳಕೆ ಮಾಡಿಕೊಂಡಿದ್ದು, ಮುಖ್ಯಮಂತ್ರಿ ಸಿದ್ದರಾಮಯ್ಯ ಸೇರಿ ಸಚಿವರುಗಳಿಗೆ ತಹಸೀಲ್ದಾರ್ ಕಚೇರಿಯ ಒಳಾವರಣದ ಮೂಲಕ ಸಮಾವೇಶಕ್ಕೆ ತೆರಳಲು ಅನುಕೂಲ ಕಲ್ಪಿಸಲಾಗಿದೆ. ಈ ಕಾಮಗಾರಿಯನ್ನು ವೀಕ್ಷಿಸಿದ ಸಂಗನಗೌಡ ಪಾಟೀಲ ಅಧಿಕಾರಿಗಳ ಜೊತೆ ಚರ್ಚಿಸಿದರು. ಒಟ್ಟಿನಲ್ಲಿ ಕಾರ್ಯಕ್ರಮದ ಯಶಸ್ವಿಗೆ ಶ್ರಮಿಸುತ್ತಿರುವ ದೃಶ್ಯಗಳು ಸಮಾವೇಶದ ಸ್ಥಳದಲ್ಲಿ ಕಂಡು ಬಂದವು. ತಹಸೀಲ್ದಾರ್ ನಾಗರಾಜ ಕೆ, ಇಇ ಬಲರಾಮ್ ನಾಯಕ, ಸಂಗು ನವಲಗುಂದ, ಆನಂದ ಚಂಗಳಿ, ಅಪ್ಪು ಗಿರಡ್ಡಿ, ಖಾಧಿರಸಾಬ ಸಂಕನೂರ, ಅಭಿಷೇಕ ನವಲಗುಂದ, ಅಸ್ಲಂ ಕೊಪ್ಪಳ ಸೇರಿದಂತೆ ಪುರಸಭೆಯ ಸಿಬ್ಬಂದಿಗಳು ಉಪಸ್ಥಿತರಿದ್ದರು.



### ಗದಗ ಜಿಲ್ಲಾ ಸ್ಲಂ ಸಮಿತಿ ಅಧ್ಯಕ್ಷ ಇಮ್ತಿಯಾಜ ಮಾನ್ವಿ ಮಾಹಿತಿ

# ನಾಳೆ ವಿವಿಧ ಬೇಡಿಕೆಗಳಿಗೆ ಆಗ್ರಹಿಸಿ ಧರಣಿ

■ವಿಜಯಸಾಕ್ಷಿ ಸುದ್ದಿ, ಗದಗ

ರಾಜ್ಯಾದ್ಯಾಂತ ಬಿಬಿಎಂಪಿ ಸೇರಿದಂತೆ, ಮಹಾನಗರ ಪಾಲಿಕೆ, ನಗರ ಸಭೆ ಮತ್ತು ಪಟ್ಟಣ ಪಂಚಾಯ್ತಿಗಳ ವ್ಯಾಪ್ತಿಯಲ್ಲಿರುವ ಖಾಸಗಿ ಗುಡಿಸಲು ಪ್ರದೇಶಗಳನ್ನು ಗುರುತಿಸಿ ರಾಜ್ಯ ಸರ್ಕಾರ ತಕ್ಷಣ ಸ್ಲಂ ಕಾಯ್ದೆ 1973ರ ಪ್ರಕಾರ ಘೋಷಣೆ ಮಾಡಿ ಸ್ಥಳೀಯ ನಿವಾಸಿಗಳಿಗೆ ನಾಗರಿಕರ ಸೌಲಭ್ಯಗಳನ್ನು ಒದಗಿಸಲು ಕ್ರಮ ಕೈಗೊಳ್ಳಲು ಆಗ್ರಹಿಸಿ ಸ್ಲಂ ಜನಾಂದೋಲನ-ಕರ್ನಾಟಕ ರಾಜ್ಯ ಸಮಿತಿಯಿಂದ ಡಿ.13ರಂದು ಬೆಳಗಾವಿಯ ಸುವರ್ಣ ಸೌಧದ ಮುಂದೆ ಬೃಹತ್ ಪ್ರತಿಭಟನೆ ಹಮ್ಮಿಕೊಳ್ಳಲಾಗಿದೆ ಎಂದು ಗದಗ ಜಿಲ್ಲಾ ಸ್ಲಂ ಸಮಿತಿ ಅಧ್ಯಕ್ಷ ಇಮ್ತಿಯಾಜ ಮಾನ್ವಿ ತಿಳಿಸಿದರು.

ನಗರದ ಪತ್ರಿಕಾಭವನದಲ್ಲಿ ಪತ್ರಿಕಾಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ಅವರು, 2023ರ ಸೆಪ್ಟಂಬರ್‌ನಲ್ಲಿ ವಸತಿ ಇಲಾಖೆಯ ಸರ್ಕಾರದ ಅಧೀನ ಕಾರ್ಯದರ್ಶಿ ಅವರು ಕರ್ನಾಟಕ ರಾಜ್ಯಾದ್ಯಾಂತ, ಕರ್ನಾಟಕ ಕೊಳಚೆ ಪ್ರದೇಶಗಳ, ಅಭಿವೃದ್ಧಿ ಮತ್ತು ನಿರ್ಮೂಲನೆ ಕಾಯಿದೆ 1973ರ ಸೆಕ್ಷನ್-3ರಡಿ ಮತ್ತು 11ರಡಿಯಲ್ಲಿ ಖಾಸಗಿ ಭೂ ಮಾಲೀಕತ್ವದ ಸ್ಲಂಗಳನ್ನು "ಕೊಳಚೆ ಪ್ರದೇಶ"ವೆಂದು ಘೋಷಣೆ ಮಾಡುವಾಗ ಸರ್ಕಾರದ ಅನುಮೋದನೆ ಪಡೆದು ತದನಂತರ ಘೋಷಣೆಗೆ ಮುಂದಿನ ಕ್ರಮ ಕೈಗೊಳ್ಳುವಂತೆ ಸುತ್ತೋಲೆ ಹೊರಡಿಸಿದ್ದಾರೆ. ಈ ಸುತ್ತೋಲೆ ಹೊರಡಿಸಿದ 2 ವರ್ಷಗಳಿಂದ ಕರ್ನಾಟಕ ಕೊಳಗೇರಿ ಅಭಿವೃದ್ಧಿ ಮಂಡಳಿ ಖಾಸಗಿ ಮಾಲೀಕತ್ವದ ಕೊಳಚೆ ಪ್ರದೇಶಗಳನ್ನು ಘೋಷಣೆ ಮಾಡುವುದನ್ನೇ ನಿಲ್ಲಿಸಿದೆ ಎಂದರು.

ಗದಗ ಜಿಲ್ಲಾ ಸ್ಲಂ ಉಪಾಧ್ಯಕ್ಷ ರವಿಕುಮಾರ ಬೆಳಮಕರ, ಕಾರ್ಯದರ್ಶಿ ಅಶೋಕ ಕುಸಬಿ, ಮಹಿಳಾ ಸಮಿತಿ ಸಂಚಾಲಕಿ ಪರವೀನಬಾನು ಹವಾಲ್ದಾರ, ಸ್ಲಂ ಸಮಿತಿ ಮುಖಂಡರಾದ ಇಬ್ರಾಹಿಂ ಮುಲ್ಲಾ, ಮೆಹಬೂಬಸಾಬ ಬಳ್ಳಾರಿ, ಮೌಲಾಸಾಬ ಗಚ್ಚಿ, ಮಕ್ತುಮಸಾಬ ಮುಲ್ಲಾನವರ, ಮಂಜುನಾಥ ಶ್ರೀಗಿರಿ, ಖಾಜಾಸಾಬ ಇಸ್ಮಾಯಿಲನವರ ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.




ಬೇರೆಲ್ಲ ಉದ್ದೇಶಗಳಿಗೆ ಸಾವಿರಾರೂ ಕೋಟಿ ರೂಗಳನ್ನು ಭೂ ಸ್ವಾಧೀನಕ್ಕೆ ನೀಡುವ ಸರ್ಕಾರ ಸ್ಲಂ ನಿವಾಸಿಗಳ ಭೂಸ್ವಾಧೀನಕ್ಕೆ ಹಣ ನೀಡುತ್ತಿಲ್ಲ. ಹಾಗಾಗಿ ಖಾಸಗಿ ಮಾಲೀಕತ್ವದ ಕೊಳಚೆ ಪ್ರದೇಶದ ಘೋಷಣೆಗೆ ತೊಡಕಾಗಿರುವ ಸುತ್ತೋಲೆಯನ್ನು ಈ ಕೂಡಲೇ ಸಾರ್ವಜನಿಕ ಹಿತದೃಷ್ಟಿಯಿಂದ ಹಿಂಪಡೆಯಬೇಕು. ರಾಜ್ಯದ ವಿವಿಧ ಜಿಲ್ಲೆಗಳಿಂದ ಸಾವಿರಾರು ಸ್ಲಂ ಜನರು ಈ ಪ್ರತಿಭಟನೆಯಲ್ಲಿ ಭಾಗವಹಿಸಲಿದ್ದಾರೆ ಎಂದು ಇಮ್ತಿಯಾಜ ಮಾನ್ವಿ ಮಾಹಿತಿ ನೀಡಿದರು.

### ಕಾಂಗ್ರೆಸ್ ಪಕ್ಷದ ವತಿಯಿಂದ ಮಾಜಿ ಸಿ.ಎಂ. ಎಸ್‌ಎಂ. ಕೃಷ್ಣ ಅವರಿಗೆ ಶ್ರದ್ಧಾಂಜಲಿ

## ಬೆಂಗಳೂರಿಗೆ ವಿಶ್ವಮಾನ್ಯತೆ ನೀಡಿದವರು ಎಸ್‌ಎಂಕೆ

■ವಿಜಯಸಾಕ್ಷಿ ಸುದ್ದಿ, ಗದಗ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ



ಮಂಗಳವಾರ ನಿಧನರಾದ ಮಾಜಿ ಮುಖ್ಯಮಂತ್ರಿ ಎಸ್.ಎಂ. ಕೃಷ್ಣ ಅವರಿಗೆ ಬುಧವಾರ ಪಟ್ಟಣದಲ್ಲಿ ಕಾಂಗ್ರೆಸ್ ಪಕ್ಷದ ವತಿಯಿಂದ ಶ್ರದ್ಧಾಂಜಲಿ ಅರ್ಪಿಸಲಾಯಿತು.

ಅವರ ಭಾವಚಿತ್ರಕ್ಕೆ ಪುಷ್ಪನಮನವನ್ನು ಸಲ್ಲಿಸಿದ ನಂತರ ಕೆಪಿಸಿಸಿ ಕಾರ್ಯದರ್ಶಿ ಸುಜಾತಾ ದೊಡ್ಡಮನಿ, ಮಾಜಿ ಶಾಸಕರಾದ ಜಿ.ಎಸ್. ಗಡ್ಡದೇವರಮಠ, ರಾಮಣ್ಣ ಲಮಾಣಿ, ರಾಮಕೃಷ್ಣ ದೊಡ್ಡಮನಿ ಮಾತನಾಡಿ, ಕರ್ನಾಟಕ ರಾಜ್ಯವನ್ನು ಸಿಂಗಾಪೂರ ಮಾಡುವ ಕನಸಿನೊಂದಿಗೆ ತಮ್ಮ ಅಧಿಕಾರಾವಧಿಯಲ್ಲಿ ಸಾಕಷ್ಟು ಅಭಿವೃದ್ಧಿ ಕಾರ್ಯಗಳನ್ನು ಎಸ್.ಎಂ. ಕೃಷ್ಣ ಅವರು ಕೈಗೊಂಡಿದ್ದರು. ಬೆಂಗಳೂರಿಗೆ ವಿಶ್ವಮಾನ್ಯತೆಯನ್ನು ನೀಡಿದ ಕೀರ್ತಿ ಅವರಿಗೆ ಸಲ್ಲುತ್ತದೆ.

ಸದಾ ಅಭಿವೃದ್ಧಿಯ ಚಿಂತನೆಯನ್ನ ಹೊತ್ತು ಮೌಲ್ಯಾಧಾರಿತ ರಾಜ-ಕಾರಣಿಯಾಗಿ ದೇಶದಲ್ಲಿಯೂ ತಮ್ಮ ಛಾಪು ಮೂಡಿಸಿದ್ದರು. ಅವರ ಅವಧಿಯಲ್ಲಿ ಶಿರಹಟ್ಟಿ ಕ್ಷೇತ್ರಕ್ಕೆ ಸಾಕಷ್ಟು ಅನುದಾನ ಬಿಡುಗಡೆಗೊಳಿಸಿರುವದನ್ನು ಮರೆಯಲಾಗದು. ಮುತ್ಸದ್ಧಿ, ಸಜ್ಜನ ರಾಜಕಾರಣಿಯಾಗಿದ್ದ ಎಸ್.ಎಂ. ಕೃಷ್ಣ ಅವರ ನಿಧನದಿಂದ ರಾಜ್ಯ ರಾಜಕೀಯಕ್ಕೆ ತುಂಬಲಾರದ ನಷ್ಟವುಂಟಾಗಿದೆ. ಅವರ ಅಗಲುವಿಕೆಯ ನೋವನ್ನು ತಡೆದುಕೊಳ್ಳುವ ಶಕ್ತಿಯನ್ನು ಅವರ ಕುಟುಂಬಕ್ಕೆ ಭಗವಂತ ಪಾಲಿಸಲಿ ಎಂದು ಹೇಳಿದರು.

ಈ ಸಂದರ್ಭದಲ್ಲಿ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಜಿ.ಆರ್. ಕೊಪ್ಪದ, ನಗರಾಧ್ಯಕ್ಷ ಅಮರೇಶ ತೆಂಬದಮನಿ, ಎಸ್.ಪಿ. ಬಳಿಗಾರ, ಪುರಸಭೆ ಅಧ್ಯಕ್ಷೆ ಯಲ್ಲಮ್ಮ ದುರ್ಗಣ್ಣವರ, ಉಪಾಧ್ಯಕ್ಷ ಫೀರದೋಷ ಆಡೂರ, ರಾಜಣ್ಣ ಕುಂಬಿ, ಬಸವರಾಜ ಓದುನವರ, ರಾಜು ಓಲೇಕಾರ, ರಾಜರತ್ನ ಹುಲಗೂರ, ರಾಮಣ್ಣ ಲಮಾಣಿ(ಶಿಗ್ಲಿ), ತಿಪ್ಪಣ್ಣ ಸಂಶಿ, ಬಾಬಣ್ಣ ಅಳವಂಡಿ, ಶಿವರಾಜ ಆದಿ, ಶಿವಜೋಗೆಪ್ಪ ಚಂದರಗಿ, ನೀಲಪ್ಪ ಶರಸೂರಿ, ಫಕ್ಕೀರೇಶ ನಂದೆಣ್ಣವರ, ದಾದಾಪೀರ ಟಕ್ಕೇದ, ಜೆ.ಎಲ್. ಸಿದ್ದಾಪೂರ, ಮಹೇಶ ಸೂರಣಗಿ ಮುಂತಾದವರಿದ್ದರು

### ಸಂತಾಪ

ಮಾಜಿ ಶಾಸಕ, ಬಿಜೆಪಿ ಹಿರಿಯ ಮುಖಂಡ ಗಂಗಣ್ಣ ಮಹಾಂತಶೆಟ್ಟರ, ಮುಖಂಡರಾದ ಎಂ.ಎಸ್. ದೊಡ್ಡಗೌಡ್ರ, ಸೋಮಣ್ಣ ಡಾಣಗಲ್, ಎಂ.ಆರ್. ಪಾಟೀಲ, ಪೂರ್ಣಾಜಿ ಖರಾಟೆ, ನಾಗರಾಜ ಕುಲಕರ್ಣಿ, ಬಸವರಾಜ ಪಲ್ಲೇದ, ಅಶೋಕ ಪಲ್ಲೇದ, ಪ್ರವೀಣ ಬಾಳಿಕಾಯಿ, ಮಹೇಶ ಹೊಗೆಸೊಪ್ಪಿನ್ ಸೇರಿದಂತೆ ಅನೇಕರು ಎಸ್.ಎಂ.ಕೃಷ್ಣ ಅವರ ಅಗಲಿಕೆಗೆ ಸಂತಾಪ ವ್ಯಕ್ತಪಡಿಸಿದ್ದಾರೆ.

# ಶಿವಸಂಗಮ ಸಮೂಹ ಸಂಸ್ಥೆಯ ದಿನದರ್ಶಿಕೆ ಬಿಡುಗಡೆ

■ವಿಜಯಸಾಕ್ಷಿ ಸುದ್ದಿ, ಗದಗ

ಶಿವಸಂಗಮ ಸಮೂಹ ಸಂಸ್ಥೆಯ ಗದುಗಿನ ಕಾರ್ಯಾಲಯದಲ್ಲಿ ಸಾಧಕ ಮಹನೀಯರನ್ನು ಸನ್ಮಾನಿಸಿ, ನೂತನ ವರ್ಷದ ದಿನದರ್ಶಿಕೆಯನ್ನು ಬಿಡುಗಡೆಗೊಳಿಸಲಾಯಿತು.

ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ಕರ್ನಾಟಕ ಹಾಲು ಉತ್ಪಾದಕ ಮಹಾಮಂಡಳಿಯ ನಿರ್ದೇಶಕ, ಸಹಕಾರ ರತ್ನ ಪ್ರಶಸ್ತಿ ಪುರಸ್ಕೃತರಾದ ಎಚ್.ಜಿ. ಹಿರೇಗೌಡ್ರ, ಗದಗ ಜಿಲ್ಲಾ ಚೇಂಬರ್ ಆಫ್ ಕಾಮರ್ಸ್ ಅಧ್ಯಕ್ಷ ತಾತನಗೌಡ ಪಾಟೀಲ, ಕಾರ್ಯದರ್ಶಿ ಅಶೋಕ ಪಾಟೀಲ, ವ್ಯಾಪಾರಸ್ಥರಾದ ಶಿವಪ್ರಸಾದ ಕಬಾಡಿ ಅವರನ್ನು ಸಂಸ್ಥೆಯಿಂದ ಸನ್ಮಾನಿಸಲಾಯಿತು.

ಅತಿಥಿಗಳು 2025ರ ವರ್ಷದ ದಿನದರ್ಶಿಕೆಯನ್ನು ಅನಾವರಣಗೊಳಿಸಿ ಶುಭ ಕೋರಿದರು. ಈ ಸಂದರ್ಭದಲ್ಲಿ ಮಾತನಾಡಿದ ಎಚ್.ಜಿ. ಹಿರೇಗೌಡ್ರ, ಶಿವಸಂಗಮ ಸಮೂಹ ಸಂಸ್ಥೆಯು ಉತ್ತಮ ಕಾರ್ಯ ಮಾಡುವ ಮೂಲಕ ಸಾರ್ವಜನಿಕರಿಗೆ ಉತ್ತಮ ಸೇವೆ ಸಲ್ಲಿಸುತ್ತಿದೆ, ವಿದ್ಯಾವಂತ ನಿರುದ್ಯೋಗಿಗಳಿಗೆ ಉದ್ಯೋಗ ಅವಕಾಶಗಳನ್ನು ಸೃಷ್ಟಿಸಿರುವದು ಅಭಿನಂದನೀಯ ಎಂದರು.

ಗದಗ ಜಿಲ್ಲಾ ಚೇಂಬರ್ ಆಫ್ ಕಾಮರ್ಸ್ ಅಧ್ಯಕ್ಷ ತಾತನಗೌಡ ಪಾಟೀಲ, ಕಾರ್ಯದರ್ಶಿ ಅಶೋಕ ಪಾಟೀಲ, ವ್ಯಾಪಾರಸ್ಥರಾದ ಶಿವಪ್ರಸಾದ ಕಬಾಡಿ ಸಂದರ್ಭೋಚಿತವಾಗಿ ಮಾತನಾಡಿದರು. ಸಮಾರಂಭದ ಅಧ್ಯಕ್ಷತೆ ವಹಿಸಿದ್ದ ಸಂಸ್ಥೆಯ ಸಂಸ್ಥಾಪಕ ಅಧ್ಯಕ್ಷ ಜಿ.ಎಂ. ಪಲ್ಲೇದ ಸಂಸ್ಥೆಯ ಕಾರ್ಯವೈಖರಿ, ಪ್ರಗತಿಯನ್ನು ವಿವರಿಸಿದರು.

ವೇದಿಕೆಯ ಮೇಲೆ ಸಂಸ್ಥೆಯ ನಿರ್ದೇಶಕರಾದ ಪ್ರಶಾಂತ ದೇಸಾಯಿಮಠ, ಎಂ.ಬಿ. ಲಿಂಗದಾಳ, ಕಳಕಪ್ಪ ನಾಗರಾಳ, ಶಿವಸಂಗಮ ಸೌಹಾರ್ದ ಸಹಕಾರಿ ಸಂಘದ ಅಧ್ಯಕ್ಷ ವ್ಹಿ.ಎಸ್. ಶಿವಕಾಳಿಮಠ, ಉಪಾಧ್ಯಕ್ಷ ಮಹೇಶ ಗಾಣಿಗೇರ ಉಪಸ್ಥಿತರಿದ್ದರು.

ಕಿರಣ ಹಿರೇಮಠ ಪ್ರಾರ್ಥಿಸಿದರು, ಪ್ರಶಾಂತ ದೇಸಾಯಿಮಠ ಪ್ರಾಸ್ತಾವಿಕವಾಗಿ ಮಾತನಾಡಿದರು. ವ್ಯವಸ್ಥಾಪಕ ಬಸವರಾಜ ಹಳ್ಳಿಕೇರಿ ನಿರೂಪಿಸಿದರು. ಎಂ.ಜಿ. ಗಾಣಿಗೇರ ವಂದಿಸಿದರು.



## ಸಂಪಾದಕೀಯ

# ನವ ಕರ್ನಾಟಕದ ನಿರ್ಮಾತೃ

ಕರ್ನಾಟಕದ ಮಾಜಿ ಮುಖ್ಯಮಂತ್ರಿ, ಮಾಜಿ ಕೇಂದ್ರ ಸಚಿವ ಎಸ್.ಎಂ. ಕೃಷ್ಣಾ ಯುಗಾಂತ್ಯವಾಗಿದೆ. ಕರ್ನಾಟಕದಲ್ಲಿ ಕಾಂಗ್ರೆಸ್ ಬಲವರ್ಧನೆ ಮಾತ್ರವಲ್ಲದೇ ನವ ಕರ್ನಾಟಕದ ನಿರ್ಮಾತೃ ಎಂದರೆ ತಪ್ಪಾಗಲಾರದು.

ಕರ್ನಾಟಕದ 10ನೆ ಮುಖ್ಯಮಂತ್ರಿಯಾಗಿದ್ದ ಎಸ್.ಎಂ. ಕೃಷ್ಣಾ, ಕಾಂಗ್ರೆಸ್ ಪಕ್ಷವನ್ನು ಅತ್ಯಂತ ಗಟ್ಟಿಯಾಗಿ ಸಂಘಟಿಸಿದ್ದರು. ಆ ಕಾರಣಕ್ಕೆ 1999 ರಲ್ಲಿ ಯಾವುದೇ ಕಚ್ಚಾಟ, ತಿಕ್ಕಾಟವಿಲ್ಲದೇ ಎಸ್.ಎಂ. ಕೃಷ್ಣಾ ಮುಖ್ಯಮಂತ್ರಿಯಾಗಿ ಅಧಿಕಾರ ಸ್ವೀಕರಿಸಿದರು. ಯಾರ ವಿರೋಧವೂ ಇಲ್ಲದೇ ಅತ್ಯಂತ ಸರಳವಾಗಿ, ಎಲ್ಲರ ವಿಶ್ವಾಸದೊಂದಿಗೆ ಅಧಿಕಾರ ನಡೆಸಿದರು.

ಕೃಷ್ಣಾ ಆಡಳಿತದಲ್ಲಿ ರಾಜಧಾನಿ ಬೆಂಗಳೂರು, ಸಿಲಿಕಾನ್ ಸಿಟಿಯಾಗಿ ಗುರುತಿಸಿಕೊಂಡಿತು. ಐಟಿ ಕ್ಯಾಪಿಟಲ್ ಆಗಿ ಬೆಳೆಯಿತು. ಇವತ್ತು ಜಾಗತಿಕ ಮಟ್ಟದಲ್ಲಿ ಬೆಂಗಳೂರು ಗುರುತಿಸಿಕೊಳ್ಳುತ್ತಿದೆ ಎಂದರೆ ಅದಕ್ಕೆ ಎಸ್.ಎಂ. ಕೃಷ್ಣಾ ಕಾರಣ. ಅಂದು ಅವರು ಬೆಂಗಳೂರು ಬೆಳವಣಿಗೆ ಬಗ್ಗೆ ಕಂಡ ಕನಸುಗಳು ಇಂದಿಗೂ ನನಸಾಗಿಲ್ಲ. ಆದರೆ ಅವರ ದೂರದೃಷ್ಟಿ ಯೋಜನೆಗಳಿಂದ ಬೆಂಗಳೂರು ಐಟಿ-ಬಿಟಿ ಸಿಟಿಯಾಗಿ ಬದಲಾಗಿದೆ. ಇವತ್ತು ಬೆಂಗಳೂರು ಸ್ಟಾರ್ಟ್‌ಅಪ್‌ಗಳ ರಾಜಧಾನಿಯೂ ಆಗಿದೆ.

ಎಸ್.ಎಂ. ಕೃಷ್ಣಾ ವಿದೇಶದಲ್ಲಿ ಉನ್ನತ ವಿದ್ಯಾಭ್ಯಾಸ ಮಾಡಿದ್ದ ಕಾರಣ ಅವರ ಜೀವನಶೈಲಿಯಲ್ಲಿ ಪಾಶ್ಚಿಮಾತ್ಯ ಶೈಲಿ ಕಾಣುತ್ತಿತ್ತು. ಬೆಂಗಳೂರು ಸಿಂಗಾಪುರ ಮಾದರಿಯಲ್ಲಿ ಬೆಳೆಯಬೇಕು ಎನ್ನುವ ಕನಸು ಕಾಣುತ್ತಿದ್ದರು. ವಿದೇಶದಲ್ಲಿ ಓದಿದ್ದ ಕಾರಣ, ಎಸ್.ಎಂ. ಕೃಷ್ಣಾ ಅವರಿಗೆ ಬಡವರ ಬಗ್ಗೆ ಕಾಳಜಿ ಇಲ್ಲ. ವಿದೇಶಿ ಸಂಸ್ಕೃತಿಯ ಪ್ರಭಾವ ಅವರ ಮೇಲಿದೆ. ಬೆಂಗಳೂರು ಕೇಂದ್ರಿತ ಅಭಿವೃದ್ಧಿ ಮಾಡುತ್ತಾರೆ ಎನ್ನುವ ಮಾತುಗಳು ಕೇಳಿಬಂದಿದ್ದವು.

ಆದರೆ ಸರಕಾರಿ ಶಾಲೆ ಮಕ್ಕಳಿಗೆ ಮಧ್ಯಾಹ್ನದ ಬಿಸಿಯೂಟ ಯೋಜನೆ ಮೂಲಕ ರಾಜ್ಯದ ಬಡವರ ಹಸಿವು ನೀಗಿಸುವ ಕೆಲಸ ಮಾಡಿದರು. ಉತ್ತರ ಕರ್ನಾಟಕ ಭಾಗದ ನೀರಾವರಿ ಯೋಜನೆಗಳಿಗೆ ಕಾಯಕಲ್ಪ ನೀಡಿ, ಉತ್ತರ ಕರ್ನಾಟಕ ಭಾಗದಲ್ಲಿ ನೀರಾವರಿ ಕ್ರಾಂತಿಗೆ ಎಸ್.ಎಂ. ಕೃಷ್ಣಾ ಮುನ್ನುಡಿ ಬರೆದರು.

ಎಸ್.ಎಂ. ಕೃಷ್ಣಾ ಎಂದಿಗೂ, ಯಾರ ವಿರುದ್ಧವೂ ವೈಯಕ್ತಿಕ ಟೀಕೆ ಮಾಡಿದವರಲ್ಲ. ತಮ್ಮ ರಾಜಕೀಯ ಜೀವನದುದ್ದಕ್ಕೂ ಅಶ್ಲೀಲ ಪದಬಳಕೆ ಮಾಡದೆ ರಾಜಕಾರಣ ಮಾಡಿದರು. ಆ ಕಾರಣಕ್ಕಾಗಿಯೇ ಅವರ ಇಂದಿನ, ಮುಂದಿನ ರಾಜಕಾರಣಿಗಳಿಗೆ ಮಾದರಿಯಾಗಿದ್ದಾರೆ.

ಆದರೆ ಅವರ ಅಧಿಕಾರಾವಧಿಯಲ್ಲಿ ಡಾ.ರಾಜ್‌ಕುಮಾರ್ ಅಪಹರಣ ಭಾರೀ ಸವಾಲು ಒಡ್ಡಿತು. ಡಾ. ರಾಜ್ ಅಪಹರಣವನ್ನು ಸಮರ್ಥವಾಗಿ ನಿಭಾಯಿಸಿದರು. ಆದರೆ ಶಾಸಕ ನಾಗೇಶ ಅವರನ್ನು ವೀರಪ್ಪನಿಂದ ಬದುಕಿಸಲು ಸಾಧ್ಯವಾಗದ ನೋವು ಕೊನೆಯ ದಿನಗಳವರೆಗೂ ಕಾಡಿತು. ರಾಜಕೀಯದ ಸಂಧ್ಯಾ ಕಾಲದಲ್ಲಿ ಬಿಜೆಪಿ ಸೇರಿದ್ದು ಮತ್ತು ಅಲ್ಪ ಅವಧಿಯಲ್ಲೆ ರಾಜಕೀಯ ನಿವೃತ್ತಿ ಘೋಷಣೆಗಳು ಅವರ ಅಭಿಮಾನಿಗಳಿಗೆ ಒಂದಷ್ಟು ಘಾಸಿಗೊಳಿಸಿತ್ತು.

ಏನೇ ಆದರೂ ಮುತ್ಸದ್ದಿ ರಾಜಕಾರಣಿಯೊಬ್ಬನನ್ನು ಕರುನಾಡು ಕಳೆದುಕೊಂಡಿದೆ. ಭವಿಷ್ಯದಲ್ಲಿ ಎಸ್.ಎಂ. ಕೃಷ್ಣಾ ಅವರಂಥ ರಾಜಕಾರಣಿಗಳು ಮೂಡಿಬರಲಿ.

**ಕಡಲೆ ಬೆಳೆಗೆ ಫಂಗಲ್ ಇನ್ಫೆಕ್ಷನ್ | ಸಿಡಿರೋಗದಿಂದ ಒಣಗುತ್ತಿರುವ ಬೆಳೆ | ಆತಂಕದಲ್ಲಿ ರೈತ ಸಮುದಾಯ**

# ಸೊರಗುತ್ತಿದೆ ಸಮೃದ್ಧ ಬೆಳೆ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಹಿಂಗಾರಿನ ರೈತರ ನೆಚ್ಚಿನ ಬೆಳೆ ಕಡಲೆಗೆ ಸಾಮಾನ್ಯವಾಗಿ ಬಾಧಿಸುವ ಕೀಟಬಾಧೆ ತಡೆಗಟ್ಟುವ ಕಾರ್ಯದಲ್ಲಿ ತಲ್ಲೀನರಾಗಿರುವ ರೈತರಿಗೀಗ ಈ ಬೆಳೆಗೆ ಫೆಂಗಲ್-ಫಂಗಸ್‌ನಿಂದ ನೆಟೆರೋಗ/ಸಿಡಿರೋಗ ಆವರಿಸಿ ಬಹುತೇಕ ಬೆಳೆ ಒಣಗುತ್ತಿರುವದರಿಂದ ರೈತರು ಚಿಂತೆಗೀಡಾಗಿದ್ದಾರೆ.



ಮುಂಗಾರಿನಲ್ಲಿ ಸಕಾಲಿಕ ಮಳೆಯಾಗದ್ದರಿಂದ ಹೆಸರು, ಶೇಂಗಾ ಬೆಳೆ ರೈತರಿಗೆ ಲಾಭ ತಂದುಕೊಡಲಿಲ್ಲ. ಹೆಸರು, ಶೇಂಗಾ ಬೆಳೆಯ ನಂತರ ಹಿಂಗಾರಿಗೆ ಬಹುತೇಕ ರೈತರು ಕಡಲೆ ಬಿತ್ತನೆ ಮಾಡಿದ್ದಾರೆ. ಹಿಂಗಾರಿನ ಬಿತ್ತನೆ ಸಮಯದಲ್ಲಿ ಮಳೆ ಬಿಡುವು ನೀಡದ್ದರಿಂದ ಬಿತ್ತನೆ ಕಾಲಾವಧಿಯಲ್ಲೂ ಬಹಳಷ್ಟು ವ್ಯತ್ಯಾಸವಾಗಿದೆ. ಕೆಲವರು ಅಕ್ಟೋಬರ್ ಮೊದಲ ವಾರ ಬಿತ್ತನೆ ಮಾಡಿದ್ದರೆ ಅನೇಕರು ನವೆಂಬರ್ ಮೊದಲ ವಾರ ಬಿತ್ತನೆ ಮಾಡಿದ್ದಾರೆ.

ಕೃಷಿ ಇಲಾಖೆಯ ಮಾಹಿತಿ ಪ್ರಕಾರ ಲಕ್ಷ್ಮೇಶ್ವರ, ಅಡರಕಟ್ಟಿ, ಗೊಜನೂರ, ಮಾಗಡಿ, ಯಳವತ್ತಿ, ಮಾಡಳ್ಳಿ, ಯತ್ತಿನಹಳ್ಳಿ, ರಾಮಗೇರಿ, ಬೂದಿಹಾಳ, ಕೊಕ್ಕರಗೊಂದಿ, ಸೂರಣಗಿ, ಬಡ್ನಿ, ಗೊಜನೂರ, ಅಡರಕಟ್ಟಿ, ದೊಡ್ಡೂರ, ಶಿಗ್ಲಿ ಗ್ರಾಮ ವ್ಯಾಪ್ತಿಯ ಕಪ್ಪು ಮಣ್ಣಿನ 8950 ಹೆಕ್ಟೇರ್ ಜಮೀನುಗಳಲ್ಲಿ ಕಡಲೆ ಬಿತ್ತನೆ ಮಾಡಲಾಗಿದೆ. ಹಿಂಗಾರಿನ ವಾಣಿಜ್ಯ ಬೆಳೆ ಕಡಲೆ ಬೆಳೆಯ ಬಗ್ಗೆ ಹೆಚ್ಚು ನಿರೀಕ್ಷೆ ಹೊಂದಿರುವ ರೈತ ಸಮುದಾಯ ಕೃಷಿ ಇಲಾಖೆಯಿಂದ ರಿಯಾಯಿತಿ ದರದಲ್ಲಿ ಸಿಗುವ ಔಷಧ ಗುಣಮಟ್ಟದ್ದಾಗಿರುವುದಿಲ್ಲ ಎಂಬ ಭಾವನೆಯಿಂದ ಖಾಸಗಿ ಕ್ರಿಮಿನಾಶಕ ಮಾರಾಟದ ಅಂಗಡಿಯಲ್ಲಿ ಹೆಚ್ಚು ಬೆಲೆಯ ಕ್ರಿಮಿನಾಶಕ/ಪೋಷಕಾಂಶ ಸಿಂಪರಣೆ ಮಾಡಿದ್ದಾರೆ. ಆದರೆ ಈಗ ಉತ್ತಮವಾಗಿಯೇ ಇದ್ದ ಬೆಳೆ ನೆಟೆಬೇರುಕೊಳೆ/ಸಿಡಿರೋಗದ ಸುಳಿಗೆ ಸಿಲುಕಿ ಒಣಗುತ್ತಿರುವ ಬೆಳೆ ಕಂಡು ಮಮ್ಮಲ ಮರುಗುತ್ತಿದ್ದಾರೆ.

ಹಿಂಗಾರಿನಲ್ಲಿ ಈ ವರ್ಷ ಉತ್ತಮ ಮಳೆಯಾಗಿದ್ದರಿಂದ ಗುರಿ ಮೀರಿ ಬಿತ್ತನೆ ಮಾಡಿರುವ ತಾಲೂಕಿನ ಶೇ.30ರಷ್ಟು ಕಡಲೆ ಬೆಳೆ ಸಿಡಿ ರೋಗದಿಂದ ಒಣಗುತ್ತಿದ್ದು, ಇದು ಇನ್ನೂ ವ್ಯಾಪಿಸುವ ಭೀತಿ ರೈತರನ್ನು ಕಾಡುತ್ತಿದೆ. ಬೀಜೋಪಚಾರ, ದುಬಾರಿ ಔಷಧ ಸಿಂಪರಣೆ ಮಾಡುತ್ತಿದ್ದರೂ ರೋಗ ನಿಯಂತ್ರಣಕ್ಕೆ ಬಾರದಿರುವುದು ದೊಡ್ಡ ತಲೆನೋವಾಗಿ ಪರಿಣಮಿಸಿದೆ.

> ಚಳಿಗಾಲದ ಸೂಕ್ತ ವಾತಾವರಣದಿಂದ ಬೆಳೆಯುವ ಕಡಲೆ ಬೆಳೆಗೆ ವಾಯುಭಾರ ಕುಸಿತದ ಹವಾಮಾನ ವೈಪರಿತ್ಯ ಮಾರಕವಾಗಿದೆ. ಅಕಾಲಿಕ ಮಳೆ/ವ್ಯತಿರಿಕ್ತ ಹವಾಮಾನದಿಂದ ಭೂಮಿಯಲ್ಲಿ ಬೆಳೆಯ ಬೇರು ಕಡಿಯುವ ಶಿಲೀಂದ್ರಗಳ ಸಂಖ್ಯೆ ಹೆಚ್ಚುತ್ತದೆ. ಆವರಿಸಿರುವ ಸಿಡಿ ರೋಗಬಾಧೆ ತಡೆಗಟ್ಟುವುದು ಕಷ್ಟಸಾಧ್ಯ. ಆದಾಗ್ಯೂ ರೋಗ ನಿಯಂತ್ರಣಕ್ಕಾಗಿ ಸಕಾಲಿಕ ಔಷಧೋಪಚಾರ ಮಾಡಲೇಬೇಕು. ಹೆಚ್ಚಿನ ಮಾಹಿತಿಗಾಗಿ ಕೃಷಿ ಅಧಿಕಾರಿ/ಕೃಷಿ ತಜ್ಞರನ್ನು ಸಂಪರ್ಕಿಸಬೇಕು.
>
> **-ಚಂದ್ರಶೇಖರ ನರಸಮ್ಮನವರ.**
> **ಕೃಷಿ ಅಧಿಕಾರಿ.**

> ಮುಂಗಾರಿನಲ್ಲಿ ಸಕಾಲಿಕ ಮಳೆಯಾಗದೇ ಮುಂಗಾರಿನ ಹೆಸರು, ಶೇಂಗಾ, ಹತ್ತಿ ಬೆಳೆಗಳು ಲಾಭ ತಂದುಕೊಡಲಿಲ್ಲ. ರೈತರ ನೆಚ್ಚಿನ, ನಿರೀಕ್ಷಿತ ಹಿಂಗಾರಿನಲ್ಲಿ ಕಡಲೆ ಬಿತ್ತನೆ ಮಾಡಲಾಗಿದೆ. ಜಮೀನು ಲಾವಣಿ, ಭೂಮಿ ಹದ ಮಾಡಿದ ಖರ್ಚು, ಗೊಬ್ಬರ, ಬೀಜ ಸಾವಿರಾರು ರೂ ಖರ್ಚು ಮಾಡಿ ಬಿತ್ತನೆ ಮಾಡಿರುವ ಬೆಳೆಗೆ ಇದೀಗ ಒಂದೂವರೆ ತಿಂಗಳದ್ದಾಗಿದ್ದು, 2 ಬಾರಿ ಕ್ರಿಮಿನಾಶಕ/ಪೋಷಕಾಂಶ ಸಿಂಪರಣೆ ಮಾಡಲಾಗಿದೆ. ಆದರೆ ಇದೀಗ ವಾಯುಭಾರ ಕುಸಿತದಿಂದ ಅಕಾಲಿಕ ಮಳೆ, ವ್ಯತಿರಿಕ್ತ ಹವಾಮಾನದಿಂದ ನೆಟೆ/ಸಿಡಿ ರೋಗಭಾದೆಯಿಂದ ಸಮೃದ್ಧವಾಗಿ ಬೆಳೆದ ಬೆಳೆ ಒಣಗುತ್ತಿದೆ. ಸರ್ಕಾರ ಇದನ್ನು ಗಂಭೀರವಾಗಿ ಪರಿಗಣಿಸಿ ಹಿಂಗಾರು ಬೆಳೆಹಾನಿಗೆ ಪರಿಹಾರ ಕಲ್ಪಿಸಬೇಕು.
>
> **– ಬಸವರಾಜ ಮೆಣಸಿನಕಾಯಿ.**
> **ರೈತರು.**



# ಮಾಜಿ ಮುಖ್ಯ ಮಂತ್ರಿ ಎಸ್.ಎಂ.ಕೃಷ್ಣ ಅಗಲಿಕೆ ಶ್ರೀ ರಂಭಾಪುರಿ ಜಗದ್ಗುರುಗಳ ಸಂತಾಪ

■ವಿಜಯಸಾಕ್ಷಿ ಸುದ್ದಿ, ಬಾಳೆಹೊನ್ನೂರು

ರಾಜ್ಯದ ಮುಖ್ಯಮಂತ್ರಿಯಾಗಿ, ಕೇಂದ್ರದ ವಿದೇಶಾಂಗ ಸಚಿವರಾಗಿ, ಮಹಾರಾಷ್ಟ್ರದ ರಾಜ್ಯಪಾಲರಾಗಿ, ರಾಜ್ಯ ವಿಧಾನಸಭಾ ಸ್ಪೀಕರ್ ಆಗಿ ಸೇವೆ ಸಲ್ಲಿಸಿದ ಪದ್ಮಭೂಷಣ ಎಸ್.ಎಂ. ಕೃಷ್ಣ ಇವರ ಅಗಲಿಕೆಗೆ ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ.ವೀರಸೋಮೇಶ್ವರ ಜಗದ್ಗುರುಗಳು ತಮ್ಮ ಸಂತಾಪ ವ್ಯಕ್ತಪಡಿಸಿದ್ದಾರೆ.



ಎಸ್.ಎಂ.ಕೃಷ್ಣ ಅವರು ರಾಜ್ಯದ ಅಭಿವೃದ್ಧಿಗೆ ತಮ್ಮದೇ ಆದ ಕೊಡುಗೆಗಳನ್ನು ನೀಡಿರುವುದನ್ನು ಮರೆಯಲಾಗದು. ಶ್ರೀ ಜಗದ್ಗುರು ರಂಭಾಪುರಿ ಪೀಠದಲ್ಲಿ ಜರುಗಿದ ಗುರು-ವಿರಕ್ತರ ಸಮಾವೇಶಕ್ಕೆ ಆಗಮಿಸಿ ಸಮಾರಂಭ ಉದ್ಘಾಟಿಸಿದ್ದು ತಮ್ಮ ಮನದಲ್ಲಿ ಹಸಿರಾಗಿದೆ. ನಂತರದ ದಿನಗಳಲ್ಲಿಯೂ ಸಹ ಅವರು ಶ್ರೀ ಪೀಠಕ್ಕೆ ಆಗಮಿಸಿ ಜಗದ್ಗುರುಗಳ ಆಶೀರ್ವಾದ ಪಡೆದು ಹೋಗಿದ್ದಾರೆ. ಹಲವಾರು ಸಮಾರಂಭಗಳಲ್ಲಿ ಅವರು ಭಾಗವಹಿಸಿದ್ದು ತಮ್ಮ ಮನದಲ್ಲಿ ಹಸಿರಾಗಿದೆ. ಅವರು ಮುತ್ಸದ್ದಿ ರಾಜ-ಕಾರಣಿಯಾಗಿದ್ದರು. ಸರಳತೆ ಮತ್ತು ಸೌಜನ್ಯತೆಯ ನಡವಳಿಕೆ ಹೊಂದಿದ್ದ ಅವರ ಅಗಲಿಕೆ ತಮಗೆ ನೋವನ್ನುಂಟು ಮಾಡಿದೆ. ದಯಾಘನನಾದ ಪರಮಾತ್ಮನು ಅವರ ಅಗಲಿದ ಪವಿತ್ರ ಆತ್ಮಕ್ಕೆ ಚಿರಶಾಂತಿ ನೀಡಲಿ. ಅವರ ಅಗಲಿಕೆಯ ದುಃಖವನ್ನು ಭರಿಸುವ ಶಕ್ತಿಯನ್ನು ಅವರ ಕುಟುಂಬ ವರ್ಗದವರಿಗೂ ಅವರ ಅಭಿಮಾನಿಗಳಿಗೂ ನೀಡಲಿ ಎಂದು ಶ್ರೀ ರಂಭಾಪುರಿ ಜಗದ್ಗುರುಗಳು ತಮ್ಮ ಸಂತಾಪ ಸೂಚಕ ಸಂದೇಶದಲ್ಲಿ ತಿಳಿಸಿದ್ದಾರೆ.

**ಅನಧಿಕೃತ ರ್‍ಯಾಲಿ, ಸಂಚಾರಕ್ಕೆ ತಡೆ ಆರೋಪ**

## ಎಸ್‌ಡಿಪಿಐ ಮುಖಂಡರ ಬಂಧನ


■ವಿಜಯಸಾಕ್ಷಿ ಸುದ್ದಿ, ಉಡುಪಿ

ಅನುಮತಿಯಿಲ್ಲದೆ ರ್‍ಯಾಲಿ ಮತ್ತು ವಾಹನ ಸಂಚಾರಕ್ಕೆ ಅಡ್ಡಿಪಡಿಸಿದ ಆರೋಪದ ಮೇಲೆ ಡೆಮಾಕ್ರಟಿಕ್ ಪಾರ್ಟಿ ಆಫ್ ಇಂಡಿಯಾ (ಎಸ್‌ಡಿಪಿಐ) ನಾಯಕರ ವಿರುದ್ಧ ಉಡುಪಿ ಪೊಲೀಸರು ಪ್ರಕರಣ ದಾಖಲಿಸಿದ್ದಾರೆ.ಉಡುಪಿ ನಗರದಲ್ಲಿ ಅನುಮತಿ ನಿರಾಕರಿಸಿದ ಹಿನ್ನೆಲೆಯಲ್ಲಿ ಹೆಜಮಾಡಿ ಟೋಲ್ ಗೇಟ್ ಬಳಿ ಚಲೋ ಬೆಳಗಾವಿ ಅಂಬೇಡ್ಕರ್ ಜಾಥಾ-2 ರ್‍ಯಾಲಿ ನಡೆಸಲಾಯಿತು.]

ಪೊಲೀಸರ ಪ್ರಕಾರ, ರ್‍ಯಾಲಿಯು ಹೆದ್ದಾರಿ ಸಂಚಾರವನ್ನು ಅಡ್ಡಿಪಡಿಸಿತು, ಕಾನೂನುಬಾಹಿರ ಸಭೆ ಮತ್ತು ಸಂಚಾರಕ್ಕೆ ಅಡ್ಡಿಪಡಿಸುವ ಸೆಕ್ಷನ್‌ಗಳ ಅಡಿಯಲ್ಲಿ ಕಾನೂನು ಕ್ರಮ ತೆಗೆದುಕೊಳ್ಳಲಾಗಿದೆ. ಪಡುಬಿದ್ರಿ ಪೊಲೀಸ್ ಠಾಣೆಯಲ್ಲಿ ಪ್ರಕರಣಗಳು ದಾಖಲಾಗಿದ್ದು, ಅಧಿಕಾರಿಗಳು ಭಾರತೀಯ ನ್ಯಾಯ ಸಂಹಿತೆಯ (ಬಿಎನ್‌ಎಸ್) ವಿವಿಧ ಸೆಕ್ಷನ್‌ಗಳ ಅಡಿಯಲ್ಲಿ ಆರೋಪವನ್ನು ದೃಢಪಡಿಸಿದ್ದಾರೆ.

“ಎಸ್‌ಡಿಪಿಐ ಮುಖಂಡರಾದ ಬಿಆರ್ ಭಾಸ್ಕರ್ ಪ್ರಸಾದ್, ಶಾಹಿದ್ ಅಲಿ, ಅಪ್ಸರ್ ಕೊಡ್ಲಿಪೇಟೆ, ರಿಯಾಜ್ ಕಡುಂಬು ಸೂಕ್ತ ಅನುಮತಿ ಪಡೆಯದೆ ರ್‍ಯಾಲಿ ನಡೆಸುತ್ತಿದ್ದಾರೆ ಎಂದು ಉಡುಪಿ ನಗರ ಠಾಣೆಯ ಪಿಎಸ್‌ಐ ಭರತೇಶ್ ನೀಡಿದ ದೂರಿನಲ್ಲಿ ಆರೋಪಿಸಲಾಗಿದೆ. ಮುಖಂಡರು ಸುಳ್ಳು ಮಾಹಿತಿಗಳನ್ನು ಹರಡುವ ಮೂಲಕ ಸಾರ್ವಜನಿಕರನ್ನು ದಾರಿ ತಪ್ಪಿಸಿದ್ದಾರೆ.

## ಸುವರ್ಣ ಸೌಧದಲ್ಲಿ ‘ಅನುಭವ ಮಂಟಪ’ದ ತೈಲಚಿತ್ರ ಅನಾವರಣ ಬಸವದಳದಿಂದ ಅಭಿನಂದನೆ



■ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕದ ಸಾಂಸ್ಕೃತಿಕ ನಾಯಕ, ವಿಶ್ವಗುರು ಬಸವಣ್ಣನವರು 12ನೇ ಶತಮಾನದಲ್ಲಿ ಸ್ಥಾಪಿಸಿದ ‘ಅನುಭವ ಮಂಟಪ’ವು ಜಗತ್ತಿನ ಮೊಟ್ಟ ಮೊದಲ ಸಂಸತ್ತು (ಪಾರ್ಲಿಮೆಂಟ್) ಎಂದು ಪರಿಗಣಿಸಲಾಗಿದೆ. ಬಸವಣ್ಣನವರು ಈ ಅನುಭವ ಮಂಟಪದಲ್ಲಿ ‘ಶೂನ್ಯಪೀಠ’ವನ್ನು ನಿರ್ಮಿಸಿ, ಇದರ ಮೊದಲ ಅಧ್ಯಕ್ಷರನ್ನಾಗಿ ‘ಅಲ್ಲಮಪ್ರಭು ದೇವರ’ನ್ನು ನೇಮಿಸಿದರು. ಇಂಥ ಅನುಭವ ಮಂಟಪ ನಮ್ಮ ಕನ್ನಡ ನಾಡಿನಲ್ಲಿರುವುದು ಕನ್ನಡಿಗರಿಗೆಲ್ಲರಿಗೂ ಹೆಮ್ಮೆಯ ವಿಷಯವಾಗಿದೆ.ಅನುಭವ ಮಂಟಪವು ಜಾತಿ, ವರ್ಣ, ವರ್ಗ ರಹಿತ-ಧರ್ಮ ಸಹಿತ, ಲಿಂಗ ಸಮಾನತೆಯ ಸಂಕೇತವಾಗಿದೆ. ಇಲ್ಲಿ ಪ್ರಜಾಪ್ರಭುತ್ವದ ಮೂಲ ಆಶಯ ಸಮಾನತೆ, ಸಹೋದರತ್ವ, ಮಾನವೀಯ ಸಂದೇಶಗಳನ್ನು ಇಡೀ ಜಗತ್ತಿಗೆ ನೀಡಿದವರು ಬಸವಾದಿ ಶಿವಶರಣರು.ಬೆಳಗಾವಿ ಸುವರ್ಣ ಸೌಧದಲ್ಲಿ 20 ಅಡಿ ಉದ್ದ, 10 ಅಡಿ ಅಗಲವುಳ್ಳ ಅನುಭವ ಮಂಟಪದ ತೈಲ ಚಿತ್ರವನ್ನು ಅನಾವರಣಗೊಳಿಸಿದ ಕರ್ನಾಟಕ ಸರಕಾರದ ಮುಖ್ಯಮಂತ್ರಿ ಸಿದ್ಧರಾಮಯ್ಯ, ವಿಧಾನಮಂಡಲದ ಅಧ್ಯಕ್ಷ ಯು.ಟಿ. ಖಾದರ ಮತ್ತು ವಿಧಾನಸಭೆಯ ಎಲ್ಲ ಸದಸ್ಯರುಗಳಿಗೆ, ಮಂತ್ರಿಗಳಿಗೂ ಗದಗ ಬಸವದಳ ಅಧ್ಯಕ್ಷರಾದ ಶರಣ ವಿ.ಕೆ. ಕರೇಗೌಡ್ರ ಹಾಗೂ ಪದಾಧಿಕಾರಿಗಳು ಅಭಿನಂದಿಸಿದ್ದಾರೆ.

# ಡಾ: ಎಸ್. ಎಂ. ಕೃಷ್ಣ ಅಗಲಿಕೆಗೆ ಗದಗ ಜಿಲ್ಲಾ ಚೇಂಬರ್ ಸಂತಾಪ

■ವಿಜಯಸಾಕ್ಷಿ ಸುದ್ದಿ, ಗದಗ

ಡಾ. ಎಸ್.ಎಂ. ಕೃಷ್ಣ ಓರ್ವ ಮುತ್ಸದ್ದಿ ರಾಜಕಾರಣಿಯಾಗಿ, ಶಾಸಕರಾಗಿ, ವಿಧಾನ ಸಭೆಯ ಅಧ್ಯಕ್ಷರಾಗಿ, ಮುಖ್ಯಮಂತ್ರಿಯಾಗಿ, ಕೇಂದ್ರದ ಸಚಿವರಾಗಿ, ಕರ್ನಾಟಕ ವಿಧಾನ ಮಂಡಳದ ಎರಡೂ ಸದನಗಳ ಸದಸ್ಯರಾಗಿ, ಸಂಸತ್ತಿನ ಎರಡೂ ಸದನಗಳ ಸದಸ್ಯರಾಗಿ ಸಲ್ಲಿಸಿದ ಸೇವೆ ಅನುಪಮವಾದದ್ದು. ಕರ್ನಾಟಕ ಕಂಡ ಅಪರೂಪದ ಹಿರಿಯ ಚೈತನ್ಯವೊಂದು ಎಲ್ಲರನ್ನು ಅಗಲಿ ಇಡೀ ದೇಶಕ್ಕೆ ತುಂಬಲಾರದ ನಷ್ಟವಾಗಿದೆ. ಅವರ ನಿಧನದ ದುಃಖ ಸಹಿಸುವ ಶಕ್ತಿಯನ್ನು ಎಲ್ಲರಿಗೂ ಭಗವಂತ ಕರುಣಿಸಲಿ ಎಂದು ಗದಗ ಜಿಲ್ಲಾ ವಾಣಿಜ್ಯೋದ್ಯಮ ಸಂಸ್ಥೆಯ ಅಧ್ಯಕ್ಷ ತಾತನಗೌಡ ಎಸ್.ಪಾಟೀಲ ಶ್ರದ್ಧಾಂಜಲಿ ಅರ್ಪಿಸಿದರು.



ಸಂಸ್ಥೆಯಲ್ಲಿ ಬುಧವಾರ ಹಮ್ಮಿಕೊಂಡಿದ್ದ ಶ್ರದ್ಧಾಂಜಲಿ ಸಭೆಯಲ್ಲಿ ಅವರು ಮಾತನಾಡಿದರು.

ಕ ನ ರ್ಾ ಟ ಕ ದ ಮುಖ್ಯಮಂತ್ರಿಗಳಾಗಿ, ರಾಜ್ಯದಲ್ಲಿ ಹಲವಾರು ಅಭಿವೃದ್ಧಿ ಕೆಲಸಗಳನ್ನು ಮಾಡಿ ಜಾಗತಿಕ ಮಟ್ಟದಲ್ಲಿ ಕನ್ನಡ ನಾಡು-ನುಡಿಗಾಗಿ ಗುರುತಿಸಿಕೊಳ್ಳಲು ಕೊಡುಗೆ ನೀಡಿದರು. ಬೆಂಗಳೂರು ನಗರದಲ್ಲಿ ಐ.ಟಿ/ಬಿ.ಟಿ ಕ್ಷೇತ್ರವನ್ನು ಹುಟ್ಟುಹಾಕುವ ಮೂಲಕ ಅದರ ಅಭಿವೃದ್ಧಿಗೆ ಶ್ರಮಿಸಿ ಉದ್ಯೋಗ ಕ್ಷೇತ್ರವನ್ನು ಶ್ರೀಮಂತಗೊಳಿಸಿದ ಕೀರ್ತಿ ಎಸ್.ಎಂ. ಕೃಷ್ಣರಿಗೆ ಸಲ್ಲುತ್ತದೆ.

ನವ ಕರ್ನಾಟಕದ ಅವಿಷ್ಕಾರಕ್ಕೆ ಮುನ್ನುಡಿ ಬರೆದು, ವಿಶ್ವ ಭೂಪಟದಲ್ಲಿ ಬೆಂಗಳೂರಿನ ಹೆಗ್ಗುರುತು ಮೂಡಿಸಿ, ಸರ್ವರಿಗೂ ಆದರ್ಶಪ್ರಾಯರಾಗಿ ತಮ್ಮ 92ನೇ ವಯಸ್ಸಿನಲ್ಲಿ ನಮ್ಮನ್ನೆಲ್ಲ ಅಗಲಿದ್ದಾರೆ. ಅವರ ಆತ್ಮಕ್ಕೆ ಪರಮಾತ್ಮನು ಚಿರಶಾಂತಿಯನ್ನು ನೀಡಲೆಂದು ಕೋರಿ ಶ್ರದ್ಧಾಂಜಲಿ ಸಲ್ಲಿಸಲಾಯಿತು.

ಸಭೆಯಲ್ಲಿ ಸಂಸ್ಥೆಯ ಪದಾಧಿಕಾರಿಗಳು, ಮಾಜಿ ಅಧ್ಯಕ್ಷರು, ಆಡಳಿತ ಮಂಡಳಿ ಸದಸ್ಯರು, ಅವಳಿ ನಗರದ ವ್ಯಾಪಾರಸ್ಥರು ಮತ್ತು ಉದ್ದಿಮೆದಾರರು ಪಾಲ್ಗೊಂಡಿದ್ದರೆಂದು ಸಂಸ್ಥೆಯ ಗೌರವ ಕಾರ್ಯದರ್ಶಿ ಅಶೋಕಗೌಡ ಕೆ.ಪಾಟೀಲ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಚಾಲನಾ ವೃತ್ತಿ ಪರೀಕ್ಷೆ ಡಿ.14ಕ್ಕೆ

■ವಿಜಯಸಾಕ್ಷಿ ಸುದ್ದಿ, ಹುಬ್ಬಳ್ಳಿ

ವಾಯವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಯಲ್ಲಿ ಸಂಖ್ಯೆ:01/2019 ದಿನಾಂಕ: 10-12-2019ರನ್ವಯ ಮೂಲ ದಾಖಲೆ/ದೈಹಿಕ ಅರ್ಹತೆ ಪರಿಶೀಲನೆಯಲ್ಲಿ ಅರ್ಹರಾದ ಅಭ್ಯರ್ಥಿಗಳಲ್ಲಿ ಪ್ರಥಮ ಹಂತವಾಗಿ ಚಾಲಕ-ಕಂ-ನಿರ್ವಾಹಕ (ಪಜಾ-ಹಿಂಬಾಕಿ) ಹಾಗೂ ಚಾಲಕ ಮತ್ತು ಚಾಲಕ-ಕಂ-ನಿರ್ವಾಹಕ ಹುದ್ದೆಗಳಿಗೆ ಅರ್ಜಿ ಸಲ್ಲಿಸಿದ ಅಭ್ಯರ್ಥಿಗಳಿಗೆ ಮಾತ್ರ ಚಾಲನಾ ವೃತ್ತಿ ಪರೀಕ್ಷೆಯನ್ನು ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಯ ಹುಮನಾಬಾದ್ ಪ್ರಾದೇಶಿಕ ತರಬೇತಿ ಕೇಂದ್ರ ಬೀದರ್-ಜಿಲ್ಲೆಯ ಚಾಲನಾ ಪಥದಲ್ಲಿ ಡಿ.14ರಿಂದ ಪ್ರಾರಂಭಿಸಲಾಗುವದು.

ಈ ಹುದ್ದೆಗಳಿಗೆ ಅರ್ಜಿ ಸಲ್ಲಿಸಿದ ಅಭ್ಯರ್ಥಿಗಳು ಮಾತ್ರ ಸಂಸ್ಥೆಯ ವೆಬ್‌ಸೈಟ್ ವಿಳಾಸ ತಿತಿತಿ.ಟಿತಿಞಡಿಣಛಿ.ಞಚಿಡಿ-ಟಿಚಿಣಚಿಞಚಿ.ರಠತ.ಎಟ ನಲ್ಲಿ ತಮ್ಮ ಅರ್ಜಿ ಸಂಖ್ಯೆ/ಜನ್ಮ ದಿನಾಂಕವನ್ನು ನಮೂದಿಸಿ ಕರೆ ಪತ್ರವನ್ನು ಮುದ್ರಿಸಿಕೊಂಡು ನಿಗದಿತ ಸ್ಥಳ/ದಿನಾಂಕ/ಸಮಯಕ್ಕೆ ಸರಿಯಾಗಿ ಹಾಜರಾಗುವಂತೆ ಸಂಸ್ಥೆಯ ಪ್ರಕಟಣೆಯಲ್ಲಿ ತಿಳಿಸಲಾಗಿದೆ.

# ಸರ್ಕಾರದ ನಡೆಗೆ ಖಂಡನೆ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ



ಪಂಚಮಸಾಲಿ ಸಮಾಜ ಬಾಂಧವರು ನ್ಯಾಯಯುತವಾದ 2ಎ ಮೀಸಲಾತಿಗೆ ಆಗ್ರಹಿಸಿ ಸುವರ್ಣ ಸೌಧದ ಎದುರು ಕೈಗೊಂಡ ಪ್ರತಿಭಟನಾ ಸಮಾವೇಶ ಹತ್ತಿಕ್ಕಲು ಕೈಗೊಂಡ ಸರ್ಕಾರದ ಕ್ರಮವನ್ನು ಲಕ್ಷ್ಮೇಶ್ವರ ತಾಲೂಕು ವೀರಶೈವ ಲಿಂಗಾಯತ ಪಂಚಮಸಾಲಿ ಸಮಾಜದ ಅಧ್ಯಕ್ಷ ಮಂಜುನಾಥ ಮಾಗಡಿ ಖಂಡಿಸಿದ್ದಾರೆ.

ಈ ಬಗ್ಗೆ ಅವರು ಪತ್ರಿಕಾ ಹೇಳಿಕೆ ನೀಡಿ, ಸರ್ಕಾರ ಪೊಲೀಸರನ್ನು ಮುಂದಿಟ್ಟುಕೊಂಡು ಸಮಾಜ ಬಾಂಧವರ ಮೇಲೆ ಲಾಠಿ ಪ್ರಹಾರ ಮಾಡಿಸಿ ಹೆದರಿಸಿ-ಬೆದರಿಸುವ ಕಾರ್ಯ ಮಾಡಿರುವುದು ಅಕ್ಷಮ್ಯ ಮತ್ತು ಅತ್ಯಂತ ಹೇಯ ಕೃತ್ಯ. ಕಳೆದ ಅನೇಕ ವರ್ಷಗಳ ನ್ಯಾಯಯುತ ಬೇಡಿಕೆಗಾಗಿ ಶಾಂತಿಯುತ ಹೋರಾಟ ಮಾಡಲು ಬಂದವರ ಮೇಲೆ ಈ ರೀತಿ ದಬ್ಬಾಳಿಕೆ ಮಾಡಿ ವಶಕ್ಕೆ ಪಡೆದಿರುವುದು ಸಮಾಜವನ್ನು ಕೆರಳಿಸಿದೆ. ಹೋರಾಟಗಾರರೊಂದಿಗೆ ಮಾತನಾಡುವ ಸೌಜನ್ಯವನ್ನು ಮುಖ್ಯಮಂತ್ರಿಗಳು ತೋರದಿರುವದು ಖೇದಕರ ಸಂಗತಿಯಾಗಿದೆ.

ಸಿಎಂ ಸಿದ್ದರಾಮಯ್ಯ ಹಾಗೂ ಕಾಂಗ್ರೆಸ್ ಸರ್ಕಾರ ಪಂಚಮಸಾಲಿ ಶ್ರೀಗಳ ಹಾಗೂ ಪಂಚಮಸಾಲಿ ಹೋರಾಟಗಾರರ ಕ್ಷಮೆ ಕೇಳಬೇಕು ಮತ್ತು ಮೀಸಲಾತಿ ಬೇಡಿಕೆಯನ್ನು ಈಡೇರಿಸಬೇಕು. ಇಲ್ಲದಿದ್ದರೆ ಸಮಾಜ ಬಾಂಧವರು ಒಗ್ಗಟ್ಟಿನಿಂದ ರಾಜ್ಯಾದ್ಯಂತ ಸರ್ಕಾರದ ಸರ್ವಾಧಿಕಾರಿ ಧೋರಣೆ, ಕುತಂತ್ರದ ವಿರುದ್ಧ ಹೋರಾಟ ಮಾಡಬೇಕಾಗುತ್ತದೆ ಎಂದು ಎಚ್ಚರಿಸಿದ್ದಾರೆ.

# ಎತ್ತಿನ ಬಂಡಿಯಲ್ಲಿ ಬಂದ ವಧು-ವರರು!

■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಇಂದಿನ ದಿನಗಳಲ್ಲಿ ಮದುವೆ ಎಂದರೆ ಯಾರಿಗೂ ಸಾಮಾನ್ಯದ ಮದುವೆಯ ಕಲ್ಪನೆಯೇ ಬರುವುದಿಲ್ಲ. ಈಗ ಏನಿದ್ದರೂ ದುಬಾರಿಯ ಮತ್ತು ಆಡಂಬರದ ಮದುವೆಗಳೇ ಹೆಚ್ಚು. ಆದರೆ ಈಚೆಗೆ ಸಮೀಪದ ಜಕ್ಕಲಿಯಲ್ಲೊಂದು ಸಾಮಾನ್ಯದ ಮದುವೆ ನಡೆದು ಎಲ್ಲರ ಗಮನ ಸೆಳೆಯಿತು.



ಜಕ್ಕಲಿಯ ಸಂಕನೂರು ಮನೆತನದ ಮದುವೆ ಇಂತಹದ್ದೊಂದು ವಿದ್ಯಮಾನಕ್ಕೆ ಸಾಕ್ಷಿಯಾಯಿತು.

ಸಂಕನೂರ ಮನೆತನದ ಸುರೇಶ ಸಂಕನೂರ ದಂಪತಿಗಳ ಮಕ್ಕಳಾದ ಸುನಿಲ್ ಮತ್ತು ಸಂಜೀವ್ ಅವರ ಮದುವೆ ಜಕ್ಕಲಿಯ ಶ್ರೀ ಅನ್ನದಾನೇಶ್ವರ ಮಂಟಪದಲ್ಲಿ ನಡೆಯಿತು.

ಮದುವೆಯ ಹಿಂದಿನ ರಾತ್ರಿ ವಿಳೆ ಕಾರ್ಯಕ್ಕೆ ವಧೂ-ವರರು ಗ್ರಾಮದ ಶ್ರೀ ವೀರಭದ್ರೇಶ್ವರ ದೇವಸ್ಥಾನದಿಂದ ಅನ್ನದಾನೇಶ್ವರ ಮಂಟಪದವರೆಗೆ ಅಲಂಕೃತ ಬಂಡಿ ಗಾಡಿಯ ಮೆರವಣಿಗೆಯಲ್ಲಿ ಬಂದರು. ಅವರ ಈ ಸರಳತೆ ಎಲ್ಲರ ಗಮನ ಸೆಳೆಯಿತು.

# ದೆಹಲಿ ಚುನಾವಣೆಗೆ ಕಾಂಗ್ರೆಸ್ ಜೊತೆ ಮೈತ್ರಿ ಇಲ್ಲ - ಅರವಿಂದ್ ಕೇಜ್ರಿವಾಲ್ ಪುನರುಚ್ಚಾರ

■ವಿಜಯಸಾಕ್ಷಿ ಸುದ್ದಿ, ನವದೆಹಲಿ

ಮುಂಬರುವ ದೆಹಲಿ ವಿಧಾನಸಭಾ ಚುನಾವಣೆಯಲ್ಲಿ ತಮ್ಮ ಪಕ್ಷ ಏಕಾಂಗಿಯಾಗಿ ಸ್ಪರ್ಧಿಸಲಿದೆ ಎಂದು ಆಮ್ ಆದ್ಮಿ ಪಕ್ಷದ ಮುಖ್ಯಸ್ಥ ಅರವಿಂದ್ ಕೇಜ್ರಿವಾಲ್ ಬುಧವಾರ ಪುನರುಚ್ಚರಿಸಿದ್ದಾರೆ. ಅಲ್ಲದೆ, ಕಾಂಗ್ರೆಸ್ ಜೊತೆಗಿನ ಮೈತ್ರಿಯನ್ನು ತಳ್ಳಿಹಾಕಿದ್ದಾರೆ. ದೆಹಲಿ ಚುನಾವಣೆಗೆ

ರಾಷ್ಟ್ರ ರಾಜಧಾನಿಯ ಆಡಳಿತರೂಢ ಪಕ್ಷವಾದ ಎಎಪಿ “ಸ್ವಂತ ಬಲದ ಮೇಲೆ” ಚುನಾವಣೆಯಲ್ಲಿ ಹೋರಾಡಲಿದೆ ಎಂದು ಕೇಜ್ರಿವಾಲ್ ಸಾಮಾಜಿಕ ಮಾಧ್ಯಮ ಎಕ್ಸ್‌ನಲ್ಲಿ ಹೇಳಿದ್ದಾರೆ. ದೆಹಲಿ ಚುನಾವಣೆಗೆ ಆಮ್ ಆದ್ಮಿ ಪಕ್ಷ ಮತ್ತು ಕಾಂಗ್ರೆಸ್ “ಮೈತ್ರಿ ಒಪ್ಪಂದದ ಅಂತಿಮ ಹಂತದಲ್ಲಿದೆ” ಎಂಬ ವರದಿಗೆ ಪ್ರತಿಕ್ರಿಯೆಯಾಗಿ ಅವರ ಹೇಳಿಕೆ ಬಂದಿದೆ. ದೆಹಲಿ ಚುನಾವಣೆಗೆ

ಕಾಂಗ್ರೆಸ್ ಜೊತೆ ಯಾವುದೇ ಮೈತ್ರಿ ಮಾಡಿಕೊಳ್ಳುವ ಸಾಧ್ಯತೆ ಇಲ್ಲ ಎಂದು ಕೇಜ್ರಿವಾಲ್ ಹೇಳಿದ್ದಾರೆ. ಎರಡೂ ಪಕ್ಷಗಳು ರಾಷ್ಟ್ರೀಯ ಮಟ್ಟದಲ್ಲಿ ವಿಪಕ್ಷಗಳ ಒಕ್ಕೂಟವಾದ ಇಂಡಿಯಾ ಮೈತ್ರಿಯಲ್ಲಿ ಇವೆ. ದೆಹಲಿಯಲ್ಲಿ ವಿಧಾನಸಭೆ ಚುನಾವಣೆ ಫೆಬ್ರವರಿ ಅಥವಾ ಅದಕ್ಕಿಂತ ಮೊದಲು ನಡೆಯುವ ನಿರೀಕ್ಷೆಯಿದ್ದು, ಚುನಾವಣಾ ಆಯೋಗ ಇನ್ನೂ ವೇಳಾಪಟ್ಟಿ ಪ್ರಕಟಿಸಿಲ್ಲ.

# ಕರವೇ ತಾಲೂಕಾಧ್ಯಕ್ಷರಾಗಿ ಶಿವು ಮಠದ ನೇಮಕ



■ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ರಕ್ಷಣಾ ವೇದಿಕೆ ಗದಗ ಜಿಲ್ಲಾ ಘಟಕದ ವತಿಯಿಂದ ಶಿರಹಟ್ಟಿ ತಾಲೂಕಿನ ನೂತನ ಅಧ್ಯಕ್ಷರನ್ನಾಗಿ ಶಿವು ಮಠದ ಇವರನ್ನು ನೇಮಕ ಮಾಡಲಾಯಿತು.

ಈ ಸಂದರ್ಭದಲ್ಲಿ ಜಿಲ್ಲಾಧ್ಯಕ್ಷ ಹನಮಂತಪ್ಪ ಎಚ್.ಅಬ್ಬಿಗೇರಿ ಮಾತನಾಡಿ, ರಾಜ್ಯಾಧ್ಯಕ್ಷರ ಆದೇಶದ ಮೇರೆಗೆ ಗದಗ ಜಿಲ್ಲೆಯಲ್ಲಿ ಸಂಘಟನೆಯನ್ನು ಗಟ್ಟಿಗೊಳಿಸುವ ಬಗ್ಗೆ ಕಾರ್ಯಕರ್ತರಿಗೆ ತಿಳುವಳಿಕೆ ಮೂಡಿಸುವುದರ ಮೂಲಕ ಜವಾಬ್ದಾರಿ ವಹಿಸಿ ಸಂಘಟನೆ ಬಲಪಡಿಸುವಂತೆ ತಾಲೂಕ ಅಧ್ಯಕ್ಷರಿಗೆ ಸೂಚಿಸಿದರು.

ಈಲ್ಲಾ ಪ್ರಧಾನ ಕಾರ್ಯದರ್ಶಿ ಬಸವರಾಜ ಹೊಗೆಸೊಪ್ಪಿನವರ ಮಾತನಾಡಿ, ಸಂಘಟನೆಯನ್ನು ಗ್ರಾಮ ಮಟ್ಟದಲ್ಲಿ ಹುಟ್ಟು ಹಾಕುವದು ಕರವೇ ತಾಲೂಕಾಧ್ಯಕ್ಷರುಗಳ ಜವಾಬ್ದಾರಿಯಾಗಿರುತ್ತದೆ. ಅದರ ಜೊತೆಗೆ ಸಂಘಟನೆಯನ್ನು ಗಟ್ಟಿಗೊಳಿಸುವಂತೆ ಸೂಚಿಸಿದರು.

ಈ ಸಂದರ್ಭದಲ್ಲಿ ಜಿಲ್ಲಾ ಉಪಾಧ್ಯಕ್ಷ ಮುತ್ತಣ್ಣ ಚವಡಣ್ಣವರ, ಮುಖಂಡರಾದ ಕೃಷ್ಣಾ ಲಮಾಣಿ, ಮಾರುತಿ ಇಳಗೇರ, ತೌಸೀಪ್ ಡಾಲಾಯತ್, ಗೌಸುಸಾಬ ಶಿರಹಟ್ಟಿ, ಕುಮಾರ ರ‍್ಯಾವಣ್ಣವರ, ವಿನಾಯಕ ಬದಿ, ದಾವಲಸಾಬ ತಹಸೀಲ್ದಾರ, ನಿಯಾಜ ಶೇಖ, ಲೋಕೇಶ ಸುತಾರ ಸೇರಿದಂತೆ ಕಾರ್ಯಕರ್ತರು ಉಪಸ್ಥಿತರಿದ್ದರು.



ಜಿಲ್ಲೆಯ ಕರ್ನಾಟಕ ರಕ್ಷಣಾ ವೇದಿಕೆ ಜಿಲ್ಲಾಧ್ಯಕ್ಷ ಹನಮಂತಪ್ಪ ಎಚ್.ಅಬ್ಬಿಗೇರಿಯವರ ನೇತೃತ್ವದಲ್ಲಿ ಗದಗ-ಬೆಟಗೇರಿಯ 50ಕ್ಕೂ ಹೆಚ್ಚು ಕಾರ್ಯಕರ್ತರು ವೇದಿಕೆಯ ತತ್ವ ಸಿದ್ಧಾಂತವನ್ನು ಮೆಚ್ಚಿ ಕರ್ನಾಟಕ ರಕ್ಷಣಾ ವೇದಿಕೆಗೆ ಸೇರ್ಪಡೆಯಾದರು. ಈ ಸಂದರ್ಭದಲ್ಲಿ ಕಾರ್ಮಿಕ ಘಟಕದ ಪ್ರಧಾನ ಕಾರ್ಯದರ್ಶಿ ತೌಸೀಫ್ ಡಾಲಾಯತ್, ಜಿಲ್ಲಾ ಉಪಾಧ್ಯಕ್ಷ ಮುತ್ತಣ್ಣ ಚವಡಣ್ಣವರ, ಚಾಲಕ ಘಟಕದ ಅಧ್ಯಕ್ಷ ಗೌಸುಸಾಬ ಶಿರಹಟ್ಟಿ, ತಾಲೂಕಾ ಕಾರ್ಯದರ್ಶಿ ನಿಯಾಜ ಶೇಖ, ನರೇಗಲ್ ನಗರ ಘಟಕದ ಮುಖಂಡ ಸಿರಾಜ ಹೊಸಮನಿ ಮುಂತಾದವರಿದ್ದರು.

**ಎಸ್‌ಡಿಪಿಐ ವತಿಯಿಂದ ದಲಿತ, ಅಲ್ಪಸಂಖ್ಯಾತರ ಸಮಸ್ಯೆಗಳಿಗೆ ಶಾಶ್ವತ ಪರಿಹಾರಕ್ಕೆ ಆಗ್ರಹಿಸಿ ಜಾಥಾ**

# 'ಚಲೋ ಬೆಳಗಾವಿ ಅಂಬೇಡ್ಕರ್ ಜಾಥಾ-2'

■ವಿಜಯಸಾಕ್ಷಿ ಸುದ್ದಿ, ಗದಗ

ನಮ್ಮದು ಅಹಿಂದ ಸರ್ಕಾರ, ನಾವು ಸಾಮಾಜಿಕ ನ್ಯಾಯದ ಚಾಂಪಿಯನ್ ಎಂದು ಹೇಳಿಕೊಳ್ಳುವ ಮುಖ್ಯಮಂತ್ರಿ ಸಿದ್ದರಾಮಯ್ಯನವರ ನೇತೃತ್ವದ ರಾಜ್ಯ ಕಾಂಗ್ರೆಸ್ ಸರ್ಕಾರ ದಲಿತ, ಅಲ್ಪಸಂಖ್ಯಾತ, ಮತ್ತು ಹಿಂದುಳಿದ ವರ್ಗಗಳ ಹಲವು ಜ್ವಲಂತ ಸಮಸ್ಯೆಗಳಿಗೆ ಶಾಶ್ವತ ಪರಿಹಾರ ನೀಡುತ್ತಿಲ್ಲ. ಕೇವಲ ನೆಪ ಮಾತ್ರದ ಮೌಖಿಕ ಹೇಳಿಕೆಗಳನ್ನು ನೀಡಿ ಕಣ್ಣೊರೆಸುವ ತಂತ್ರ ಮಾಡುತ್ತಿದೆ. ಈ ಅಸಹಾಯಕ ಯು ಟರ್ನ್ ಚಾಳಿಯನ್ನು ಖಂಡಿಸಿ, ಚಳಿಗಾಲದ ಅಧಿವೇಶನ ನಡೆಯುವ ಸುವರ್ಣಸೌಧಕ್ಕೆ 'ಚಲೋ ಬೆಳಗಾವಿ ಅಂಬೇಡ್ಕರ್ ಜಾಥಾ-2' ಹಮ್ಮಿಕೊಂಡಿದ್ದೇವೆ ಎಂದು ಎಸ್‌ಡಿಪಿಐ ಪಕ್ಷದ ಗದಗ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಅನ್ವರ್ ಬಾಗೇವಾಡಿ ಹೇಳಿದರು.

ನಗರದ ಪತ್ರಿಕಾ ಭವನದಲ್ಲಿ ಪತ್ರಿಕಾಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ಅವರು, ಪರಿಶಿಷ್ಟ ಜಾತಿಗಳ ಒಳಮೀಸಲಾತಿಯನ್ನು ಕೂಡಲೇ ಜಾರಿಗೊಳಿಸಬೇಕು. ಮುಸ್ಲಿಮರ ಮೀಸಲಾತಿಯನ್ನು ಪುನಃ ಸ್ಥಾಪಿಸಿ ಶೇ. 8ಕ್ಕೆ ಏರಿಸಬೇಕು. ಕಾಂತರಾಜ್ ಆಯೋಗದ



ವರದಿಯನ್ನು ಜಾರಿಗೊಳಿಸಬೇಕು. ವಕ್ಫ್ ಆಸ್ತಿಗಳ ರಕ್ಷಣೆ, ವಕ್ಫ್ ತಿದ್ದುಪಡಿ ಮಸೂದೆಯನ್ನು ಜಾರಿಗೊಳಿಸಬಾರದೆನ್ನುವ ನಿರ್ಣಯವನ್ನು ಸದನದಲ್ಲಿ ಕೈಗೊಳ್ಳಬೇಕು. ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಅಭಿವೃದ್ಧಿಗೆ ಮೀಸಲಿರುವ ಖಎಕ/ಖಿಎಕ ಹಣವನ್ನು ಬೇರೆ ಯಾವುದೇ ಯೋಜನೆಗಳಿಗೆ ಬಳಸಬಾರದು. 25-26 ನಾಲಿನ ಬಜೆಟ್‌ನಲ್ಲಿ, ಅಲ್ಪಸಂಖ್ಯಾತರ ಕಲ್ಯಾಣಕ್ಕೆ 10 ಸಾವಿರ ಕೋಟಿ ಮೀಸಲಿಡಬೇಕು ಎಂದರು.

ಗದಗ ಜಿಲ್ಲಾಧ್ಯಕ್ಷ ಬಿಲಾಲ್ ಗೋಕಾವಿ ಮಾತನಾಡಿ, ಜಾಥಕ್ಕೆ ಜಿಲ್ಲೆಯ ಜನತೆ ಹಾಗೂ ವಿವಿಧ ಸಂಘಟನೆಗಳ ನಾಯಕರ ಬೆಂಬಲವನ್ನು ಯಾಚಿಸಿದರು.

ಈ ಸಂದರ್ಭದಲ್ಲಿ ಉಪಾಧ್ಯಕ್ಷ ಹಿದಾಯತುಲ್ಲಾ ಕಾಗದಗಾರ, ಕಾರ್ಯದರ್ಶಿ ಇರ್ಫಾನ್ ಗುಳಗುಂದಿ, ಜಿಲ್ಲಾ ಸಂಘಟನಾ ಕಾರ್ಯದರ್ಶಿ ಖಾಜಾ ಮೈನುದ್ದಿನ್,

ದಲಿತ, ಅಲ್ಪಸಂಖ್ಯಾತ ಮತ್ತು ಹಿಂದುಳಿದ ವರ್ಗಗಳ ಅಭಿವೃದ್ಧಿ ಮತ್ತು ಈ ಸಮುದಾಯಗಳ ಸಾಂವಿಧಾನಿಕ ಹಕ್ಕು ರಕ್ಷಣೆ ಕಾಯಿದೆ ಮತ್ತು ಯೋಜನೆಗಳಿಗಾಗಿ ಆಗ್ರಹಿಸಿ ಎಸ್‌ಡಿಪಿಐ ವತಿಯಿಂದ ಡಿ. 10ರಂದು ಉಡುಪಿಯಿಂದ ಜಾಥಾ ಪ್ರಾರಂಭವಾಗಿದ್ದು, ವಿವಿಧ ಜಿಲ್ಲೆಗಳಲ್ಲಿ ಸಂಚರಿಸಿ, ಡಿ.13ರಂದು ಗದಗ ಜಿಲ್ಲೆಗೆ ಪ್ರವೇಶಿಸಲಿದೆ. ಅಂದು, ರಾತ್ರಿ 8 ಗಂಟೆಗೆ ನಗರದ ಮುಳಗುಂದ ನಾಕಾ ಹತ್ತಿರ ಹೆಸ್ಕಾಂ ಕಛೇರಿ ಎದುರಿಗೆ ಸಮಾವೇಶ ನಡೆಯಲಿದೆ. ಮುಂದೆ ಜಾಥಾವು ವಿವಿಧ ಜಿಲ್ಲೆಗಳಲ್ಲಿ ಸಂಚರಿಸಿ ಡಿ. 16ರಂದು ಬೆಳಗಾವಿಗೆ ತಲುಪುವುದು ಎಂದು ಅನ್ವರ್ ಬಾಗೇವಾಡಿ ವಿವರಿಸಿದರು.

ಜಿಲ್ಲಾ ಸಮಿತಿ ಸದಸ್ಯರಾದ ಮುಸ್ತಾಕ್ ಕಟ್ಟಿಮನಿ, ಅನ್ವರ್ ಮುಲ್ಲಾ, ಹಸ್ಸನ್ ನಾಗನೂರ್, ಮೊಹಮ್ಮದ್ ಸಾದಿಕ್ ಶಿರಹಟ್ಟಿ, ಗದಗ ವಿಧಾನಸಭಾ ಕ್ಷೇತ್ರದ ಅಧ್ಯಕ್ಷ ಅಫ್ಘಾನ್ ತರಫ್ದಾರ್, ಸಮೀರ್ ಕೊಟ್ಟೂರ್, ಇಬ್ರಾಹಿಂ ಕುಂದರಪಿ ಇನ್ನಿತರರು ಉಪಸ್ಥಿತರಿದ್ದರು.

# ನೇತ್ರಗಳ ಬಗ್ಗೆ ಜಾಗೂರಕತೆ ಅವಶ್ಯ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಮಾನವನಿಗೆ ಎಲ್ಲ ಅಂಗಗಳಲ್ಲಿ ನೇತ್ರ ಬಹುಮುಖ್ಯವಾಗಿದ್ದು, ಅದರ ಬಗ್ಗೆ ಎಲ್ಲರೂ ಜಾಗೂರಕರಾಗಿರಬೇಕು. ನಿಯಮಿತವಾಗಿ ಕಣ್ಣುಗಳ ತಪಾಸಣೆ ಮಾಡಿಸಿಕೊಳ್ಳುವದರಿಂದ ಕಣ್ಣಿನ ತೊಂದರೆಗಳನ್ನು ತಡೆಗಟ್ಟಬಹುದು ಎಂದು ನೇತ್ರ ತಜ್ಞರಾದ ಡಿ.ಎಂ. ಬೆಟಗೇರಿ ಮತ್ತು ಪ್ರಭಾ ಭಟ್ ಹೇಳಿದರು.

ಅವರು ಪಟ್ಟಣದ ಬಸ್ತಿಬಣದ ಗುರು ಮಹಾರಾಜ ಮಂದಿರದಲ್ಲಿ ಹಿಂದೂ ಜನ ಜಾಗೃತಿ ಸಮಿತಿಯಿಂದ ಸಾರ್ವಜನಿಕರಿಗೆ ಹಮ್ಮಿಕೊಂಡಿದ್ದ ಉಚಿತ ಕಣ್ಣಿನ ತಪಾಸಣೆ ಶಿಬಿರದಲ್ಲಿ



ಮಾತನಾಡಿದರು.

ಇತ್ತೀಚಿನ ದಿನಗಳಲ್ಲಿ ಕಣ್ಣಿನ ಸಮಸ್ಯೆ ಗಂಭೀರ ಸ್ವರೂಪದ ಕಾಯಿಲೆಯಾಗಿ ಪರಿಣಮಿಸುತ್ತಿದೆ. ಆರಂಭದಲ್ಲೇ ತಪಾಸಣೆ ಮಾಡಿಸಿ, ಸಮಸ್ಯೆ ಕಂಡರೆ ಚಿಕಿತ್ಸೆ ಪಡೆಯಬೇಕು ಎಂದು ಸಲಹೆ ನೀಡಿದರು.

ಕಾರ್ಯಕ್ರಮದಲ್ಲಿ 100ಕ್ಕೂ ಅಧಿಕ ಜನರ ಕಣ್ಣಿನ ತಪಾಸಣೆ ಮಾಡಲಾಯಿತು. ತಪಾಸಣೆ ಮಾಡಿಸಿಕೊಂಡ ಜನರಿಗೆ ಸರಕಾರದ ಯೋಜನೆ ಅಡಿಯಲ್ಲಿ ಉಚಿತವಾಗಿ 100 ಕನ್ನಡಕಗಳನ್ನು ನೀಡಲಾಯಿತು. ಈ ಸಂದರ್ಭದಲ್ಲಿ ಹಿಂದೂ ಜನ ಜಾಗೃತಿ ಸಮಿತಿಯ ಶೋಭಾ ಇಟಗಿ, ಶಾಂತಾ ಹುಲಕೋಟಿ, ಗೀತಾ ಬಡಿಗೇರ, ಪದ್ಮಾ ಇಟಗಿ ಪುಷ್ಪಾ ಬದಿ ಸೇರಿದಂತೆ ಅನೇಕರು ಇದ್ದರು.



ಅಖಿಲ ಕರ್ನಾಟಕ ವಿಶ್ವಕರ್ಮ ಮಹಾಸಭಾ ಗದಗ ಜಿಲ್ಲಾ ಘಟಕದ ವತಿಯಿಂದ ಮಾಜಿ ಮುಖ್ಯಮಂತ್ರಿ ಎಸ್.ಎಂ. ಕೃಷ್ಣರವರಿಗೆ ಭಾವಪೂರ್ಣ ಶ್ರದ್ಧಾಂಜಲಿಯನ್ನು ಸಲ್ಲಿಸಲಾಯಿತು. ಈ ಸಭೆಯಲ್ಲಿ ಜಿಲ್ಲಾಧ್ಯಕ್ಷ ದೇವೇಂದ್ರಪ್ಪ ಬಡಿಗೇರಿ, ಜಿಲ್ಲಾ ಗೌರವಾಧ್ಯಕ್ಷ ರಾಮಣ್ಣ ಕಮ್ಮಾರ, ಆನಂದ ಕಮ್ಮಾರ, ಶಶಿಧರ ಬೆನಕೊಪ್ಪ, ಸತೀಶ ಬಡಿಗೇರ ಸೇರಿದಂತೆ ತಾಲೂಕಾ, ಜಿಲ್ಲಾ ವಿಶ್ವಕರ್ಮ ಸಮಾಜದ ಅಧ್ಯಕ್ಷರು, ಉಪಾಧ್ಯಕ್ಷರು, ಪದಾಧಿಕಾರಿಗಳು ಪಾಲ್ಗೊಂಡಿದ್ದರು.

# ಮಲ್ಲಿಕಾರ್ಜುನ ಖಂಡಮ್ಮನವರರಿಗೆ 'ಬಸವಶ್ರೀ' ಪ್ರಶಸ್ತಿ



■ವಿಜಯಸಾಕ್ಷಿ ಸುದ್ದಿ, ಗದಗ

ಅಕ್ಷರ ದೀಪ ಫೌಂಡೇಶನ್, ಅಕ್ಷರ ದೀಪ ಸಾಹಿತ್ಯ ಮತ್ತು ಸಾಂಸ್ಕೃತಿಕ ಕಲಾ ವೇದಿಕೆ ಜಿಲ್ಲಾ ಘಟಕ ಬೆಳಗಾವಿ ಹಾಗೂ ವಿಜಯಪುರ ವತಿಯಿಂದ ವಿಜಯಪುರ ಜಿಲ್ಲೆಯ ಬಸವನಬಾಗೇವಾಡಿಯ ವಿರಕ್ತಮಠದಲ್ಲಿ ವಾರ್ಷಿಕೋತ್ಸವ ಹಾಗೂ ಶರಣ ಸಾಹಿತ್ಯ ಸಮ್ಮೇಳನದದಲ್ಲಿ ಕಳಸಾಪೂರ ಗ್ರಾಮದ ಬಸವಕೇಂದ್ರದ ಕಾರ್ಯಾಧ್ಯಕ್ಷ, ಕನ್ನಡ ಚಿಂತಕ ಮಲ್ಲಿಕಾರ್ಜುನ ಖಂಡಮ್ಮನವರ ಅವರಿಗೆ 'ಬಸವಶ್ರೀ' ಪ್ರಶಸ್ತಿ ನೀಡಿ ಗೌರವಿಸ 'ಲಾಯಿತು.ಬಸವನಬಾಗೇವಾಡಿಯ ಶ್ರೀ ಮ.ನಿ.ಪ್ರ. ಸಿದ್ಧಲಿಂಗ ಮಹಾಸ್ವಾಮಿಗಳು ವಿರಕ್ತಮಠ, ಶ್ರೀ ಷ. ಬ್ರ. ಶಿವಪ್ರಕಾಶ ಶಿವಾಚಾರ್ಯರು ಪ್ರಶಸ್ತಿ ನೀಡಿ ಆಶೀರ್ವದಿಸಿದರು. ಈ ಸಂದರ್ಭದಲ್ಲಿ ಸಿದ್ಧರಾಮ ಬಿರಾದಾರ, ಶಿವಾನಂದ ಡೋಣೂರ, ವೀರಣ್ಣ ಮರ್ತುರ, ಜಯಶ್ರೀ ತೆಗ್ಗಿನಮಠ, ರೋಹಿಣಿ ಬಿ.ಮಿರ್ಜಿ, ಡಾ. ಮಹೇಂದ್ರ ಕುರ್ಡಿ, ಡಾ. ಪ್ರವೀಣಾ ಎಸ್.ಪಾಟೀಲ, ಪ್ರವೀಣಕುಮಾರ ಕನ್ಯಾಳ ಉಪಸ್ಥಿತರಿದ್ದರು.

**ಡಿ.15ರಂದು ಮಾತೋಶ್ರೀ ಗುರವ್ವ ಶಿವಲಿಂಗಪ್ಪ ಹೊರಟ್ಟಿ ಪುಣ್ಯ ಸ್ಮರಣೆ**

# 12 ಜನ ಸಾಧಕರಿಗೆ 'ಅವ್ವ ಪ್ರಶಸ್ತಿ' ಪ್ರದಾನ

■ವಿಜಯಸಾಕ್ಷಿ ಸುದ್ದಿ, ಹುಬ್ಬಳ್ಳಿ

ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಅವರ ಅವ್ವ ಸೇವಾ ಟ್ರಸ್ಟ್ ನೀಡುವ ಪ್ರಸ್ತುತ ವರ್ಷದ 'ಅವ್ವ ಪ್ರಶಸ್ತಿ'ಗೆ ರಾಜಕಾರಣಿ ಎಸ್.ಆರ್. ಪಾಟೀಲ, ಪತ್ರಕರ್ತ ಚಂದ್ರಕಾಂತ ವಡ್ಡು, ಸಿತಾರ ವಾದಕ ಛೋಟೆ ರಹಮತ್‌ಖಾನ್ ಸೇರಿ ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿದ 12 ಮಂದಿಯನ್ನು ಆಯ್ಕೆ ಮಾಡಲಾಗಿದೆ.

ಹುಬ್ಬಳ್ಳಿಯ ಗುಜರಾತ ಭವನದಲ್ಲಿ ಡಿಸೆಂಬರ್ 15ರಂದು ಬೆಳಿಗ್ಗೆ 10.30ಕ್ಕೆ ನಡೆಯಲಿರುವ ಗುರವ್ವ ಶಿವಲಿಂಗಪ್ಪ ಹೊರಟ್ಟಿ ಅವರ 14ನೇ ಪುಣ್ಯಸ್ಮರಣೆ ಕಾರ್ಯಕ್ರಮದಲ್ಲಿ ಸಾಧಕರಿಗೆ 'ಅವ್ವ ಪ್ರಶಸ್ತಿ' ಪ್ರದಾನ ಮಾಡಲಾಗುತ್ತದೆ ಎಂದು ಅವ್ವ ಸೇವಾ ಟ್ರಸ್ಟ್ ಅಧ್ಯಕ್ಷ ಬಸವರಾಜ ಹೊರಟ್ಟಿ ತಿಳಿಸಿದ್ದಾರೆ.

ಚಿತ್ತರಗಿಯ ಶ್ರೀ ವಿಜಯಮಹಾಂತೇಶ್ವರ ಸಂಸ್ಥಾನಮಠದ ಗುರುಮಹಾಂತ ಸ್ವಾಮೀಜಿ



ಶ್ರೀ ಎಸ್ ಆರ್ ಪಾಟೀಲ್ | ಶ್ರೀ ಚಂದ್ರಕಾಂತ ವಡ್ಡು | ಡಾ|| ಸಂಗಮನಾಥ ಲೋಕಾಪೂರ | ಶ್ರೀ ಛೋಟೆ ರಹಮತ್ ಖಾನ್ | ಶ್ರೀಮತಿ ರೇಖಾ ಹೆಗಡೆ | ಶ್ರೀ ಕೇಶವ ಹೆಗಡೆ ಕೊಳಗಿ
ಶ್ರೀ ಮಹೇಂದ್ರಕುಮಾರ್ ಸಿಂಘಿ | ಶ್ರೀ ಎಸ್ ಮಹದೇವಯ್ಯ | ಶ್ರೀಮತಿ ರಾಜೇಶ್ವರಿ ಪಾಟೀಲ್ | ಶ್ರೀ ಬಸವರಾಜ್ ಶಿಗ್ಗಾಂವಿ | ಕುಮಾರಿ ತ್ರಿಶಾ ಜಡಲಾ | ಕುಮಾರಿ ಅಂಕಿತಾ ಕೊಣ್ಣೂರ

ಸಾನ್ನಿಧ್ಯದಲ್ಲಿ, ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ ಕಾರ್ಯಕ್ರಮ ಉದ್ಘಾಟಿಸಲಿದ್ದಾರೆ. ಕೇಂದ್ರ ಸಚಿವ ಪ್ರಲ್ಹಾದ ಜೋಶಿ ಪ್ರಶಸ್ತಿ ಪ್ರದಾನ ಮಾಡಲಿದ್ದಾರೆ. ಉಪನ್ಯಾಸಕಿ ಅಕ್ಷಯಾ ಗೋಖಲೆ ಅತಿಥಿಯಾಗಿ ಪಾಲ್ಗೊಳ್ಳಲಿದ್ದಾರೆ.

ಪತ್ರಿಕೆಯ ವರದಿ, ಮಾಹಿತಿ ಹಾಗೂ ಸಮಾಜದಲ್ಲಿ ಅತ್ಯುತ್ತಮ ಸೇವೆ ಮಾಡಿದವರನ್ನು ಗುರುತಿಸಿ ಪ್ರಶಸ್ತಿಗೆ ಆಯ್ಕೆಮಾಡಲಾಗಿದೆ.

ಇದಕ್ಕೊಂದು ಪ್ರತ್ಯೇಕ ಸಮಿತಿ ರಚಿಸಿದ್ದು, ಈವರೆಗೆ 68 ಮಂದಿಗೆ 'ಅವ್ವ ಪ್ರಶಸ್ತಿ' ನೀಡಿ ಗೌರವಿಸಲಾಗಿದೆ ಎಂದು ಹೊರಟ್ಟಿ ಹೇಳಿದರು. ಈ ಸಂದರ್ಭದಲ್ಲಿ ಕಾರ್ಯದರ್ಶಿ ಶಶಿ ಸಾಲಿ ಮುಂತಾದವರು ಉಪಸ್ಥಿತರಿದ್ದರು.

ಸಾಹಿತಿ ಸಂಗಮನಾಥ ಲೋಕಾಪುರ, ಗಾಯಕಿ ರೇಖಾ ಹೆಗಡೆ, ಯಕ್ಷಗಾನ ಭಾಗವತ ಕೇಶವ ಹೆಗಡೆ ಕೊಳಗಿ, ಉದ್ಯಮಿ ಮಹೇಂದ್ರ ಸಿಂಘಿ, ಬಸವ ತತ್ವ ಪ್ರಚಾರಕ ಎಸ್. ಮಹದೇವಯ್ಯ, ಸಮಾಜ ಸೇವಕಿ ರಾಜೇಶ್ವರಿ ಪಾಟೀಲ, ಜಾನಪದ ಕಲಾವಿದ ಬಸವರಾಜ ಶಿಗ್ಗಾಂವಿ, ಸ್ಕೇಟ್ ಕ್ರೀಡಾಪಟು ತ್ರಿಶಾ ಜಡಲಾ ಹಾಗೂ ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ 625ಕ್ಕೆ 625 ಅಂಕ ಗಳಿಸಿದ ಬಾಗಲಕೋಟೆಯ ಅಂಕಿತಾ ಕೊಣ್ಣೂರ ಅವರು ಅವ್ವ ಪ್ರಶಸ್ತಿಗೆ ಆಯ್ಕೆಯಾಗಿದ್ದಾರೆ. ಸ್ಮರಣಿಕೆ ಜೊತೆಗೆ 25 ಸಾವಿರ ರೂ ನಗದು ಇರಲಿದೆ ಎಂದು ಬಸವರಾಜ ಹೊರಟ್ಟಿ ಮಾಹಿತಿ ನೀಡಿದ್ದಾರೆ.

# ಪಂಚಮಸಾಲಿ ಹೋರಾಟಗಾರರ ಬಂಧನಕ್ಕೆ ಖಂಡನೆ



■ವಿಜಯಸಾಕ್ಷಿ ಸುದ್ದಿ, ಗದಗ

ಪ್ರಥಮ ಜಗದ್ಗುರು ಶ್ರೀ ಬಸವಜಯ ಮೃತ್ಯುಂಜಯ ಸ್ವಾಮಿಗಳು 2ಎ ಮೀಸಲಾತಿಗೆ ಆಗ್ರಹಿಸಿ ಬೆಳಗಾವಿಯ ಸುವರ್ಣ ಸೌಧದ ಎದುರಿಗೆ ಶಾಂತಿಯುತ ಪ್ರತಿಭಟನೆ ನಡೆಸುತ್ತಿರುವಾಗ ಸಮಾವೇಶ ನಡೆಸಿದ ಪಂಚಮಸಾಲಿಗರ ವಿರುದ್ಧ ಪೊಲೀಸರನ್ನು ಬಳಸಿ ಲಾಠಿ ಚಾರ್ಜ್ ಮಾಡಿಸಿ ಹೋರಾಟವನ್ನು ಹತ್ತಿಕ್ಕುವ ಕೆಲಸ ಮಾಡಿದ್ದು ಖಂಡನೀಯ ಎಂದು ಭದ್ರೇಶ ಕುಸ್ಲಾಪೂರ ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಈ ಬಗ್ಗೆ ಪತ್ರಿಕಾ ಹೇಳಿಕೆ ನೀಡಿರುವ ಅವರು, ಶಾಂತಿಯುತ ಪ್ರತಿಭಟನೆ ಮಾಡುತ್ತಿರುವ ಪಂಚಮಸಾಲಿ ಸಮಾಜದ ಸ್ವಾಮೀಜಿಗಳಾದ ಶ್ರೀ ಬಸವ ಜಯ ಮೃತ್ಯುಂಜಯ ಸ್ವಾಮೀಜಿ, ಶಾಸಕರಾದ ಬಸನಗೌಡ ಪಾಟೀಲ ಸೇರಿದಂತೆ ಸಮಾಜದ ಹೋರಾಟಗರರನ್ನು ಬಂಧಿಸಿರುವುದು ನಾಚಿಕೆಗೇಡಿನ ಸಂಗತಿಯಾಗಿದೆ. ಮೌನ ಪ್ರತಿಭಟನೆಯಲ್ಲಿದ್ದ ಸ್ವಾಮೀಜಿಯವರನ್ನು ಬಂಧಿಸಿರುವುದು ಖಂಡನೀಯ ಎಂದಿದ್ದಾರೆ.

**ಡಾ. ಸಿದ್ದಣ್ಣ ಜಕಬಾಳರಿಗೆ ಪ್ರೊ. 'ಸಿ.ವಿ. ಕೆರಿಮನಿ ತಿರುಳ್ಗನ್ನಡ ಸಿರಿ' ಪ್ರಶಸ್ತಿ ಪ್ರದಾನ**

# ಜನಪದ ಸಾಹಿತ್ಯ ಎಲ್ಲ ಸಾಹಿತ್ಯಕ್ಕೆ ಮೂಲ

■ವಿಜಯಸಾಕ್ಷಿ ಸುದ್ದಿ, ಗದಗ

ಜನಪದ ಸಾಹಿತ್ಯದ ಸತ್ವ, ಶಕ್ತಿ ಮಾನವನ ಬದುಕಿಗೆ ಮೂಲ ಪ್ರೇರಣೆಯಾಗಿದೆ. ಎಲ್ಲ ಸಾಹಿತ್ಯದ ಉಗಮಕ್ಕೆ ಇದೇ ಮೂಲ. ಇಂದಿನ ತಲೆಮಾರಿನ ಯುವಕರು ಜನಪದ ವೈವಿಧ್ಯದಲ್ಲಿ ಆಸಕ್ತಿಯನ್ನು ತಾಳಬೇಕು. ಈ ದಿಸೆಯಲ್ಲಿ ಡಾ. ಸಿದ್ಧಣ್ಣ ಜಕಬಾಳ ಇವರ ಕೊಡುಗೆ ಅಪಾರವಾದುದು ಎಂದು ಬೆಳ್ಳಟ್ಟಿಯ ರಾಮಲಿಂಗೇಶ್ವರ ದಾಸೋಹಮಠದ ಪೂಜ್ಯ ಬಸವರಾಜ ಮಹಾಸ್ವಾಮಿಗಳು ತಿಳಿಸಿದರು.

ಅವರು ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತು ಗದಗದಿಂದ ಜರುಗಿದ ಪ್ರೊ. ಸಿ.ವಿ. ಕೆರಿಮನಿ ದತ್ತಿ ಕಾರ್ಯಕ್ರಮದಲ್ಲಿ ಡಾ. ಸಿದ್ಧಣ್ಣ ಜಕಬಾಳ ಇವರಿಗೆ 'ಪ್ರೊ. ಸಿ.ವಿ. ಕೆರಿಮನಿ ತಿರುಳ್ಗನ್ನಡ ಸಿರಿ' ದತ್ತಿ ಪ್ರಶಸ್ತಿ ಪ್ರದಾನ ಸಮಾರಂಭದ ಸಾನ್ನಿಧ್ಯ ವಹಿಸಿ ಮಾತನಾಡಿದರು.

ವ್ಯಕ್ತಿ ಸತ್ತಮೇಲೆ ವ್ಯಕ್ತಿ ಮಾಡಿದ ಮಹತ್ಕಾರ್ಯಗಳು, ಶೋಧನೆಗಳು, ಸಂಶೋಧನೆಗಳು ಹಾಗೇಯೇ ಉಳಿಯಬೇಕು, ಇತರರಿಗೆ ಉಪಯೋಗವಾಗಬೇಕು ಎನ್ನುವಂತೆ ಸಿ.ವಿ. ಕೆರಿಮನಿಯವರು ಬದುಕಿದ್ದಾ-ರೆಂದು ತಿಳಿಸಿದರು.

ಸಾಹಿತಿ ಪೂರ್ಣಾಜಿ ಕರಾಟೆ ಮಾತನಾಡಿ, ಗದಗ ಜಿಲ್ಲೆಯ ಲಕ್ಷ್ಮೇಶ್ವರವನ್ನು ಕಾರ್ಯಕ್ಷೇತ್ರ ಮಾಡಿಕೊಂಡು ಕಳೆದ ನಾಲ್ಕು ದಶಕಗಳಿಂದ ಸಾಹಿತ್ಯ ಸರಸ್ವತಿಯ ಸೇವೆ ಮಾಡಿದ ಕೆರಿಮನಿಯವರು ಅರ್ಪಣಾ ಮನೋಭಾವದ ಕನ್ನಡ ಪ್ರಾಧ್ಯಾಪಕ, ಪ್ರಾಚಾರ್ಯ, ಸೃಜನಶೀಲ ಸಾಹಿತಿಗಳಾಗಿ ಅಪಾರ ಶಿಷ್ಯ ಬಳಗ ಹೊಂದಿ ಮೂವತ್ತಕ್ಕೂ ಅಧಿಕ



ಕೃತಿಗಳನ್ನು ರಚಿಸಿದ್ದಾರೆಂದರು.

2024ರ ಪ್ರಥಮ ಪ್ರೊ. ಸಿ.ವಿ. ಕೆರಿಮನಿ ದತ್ತಿ ಪ್ರಶಸ್ತಿಯನ್ನು ಪ್ರದಾನ ಮಾಡಿ ಜಿಲ್ಲಾ ಕಸಾಪ ಮಾಜಿ ಅಧ್ಯಕ್ಷ ಪ್ರೊ. ಎ.ಬಿ. ಹಿರೇಮಠ ಮಾತನಾಡಿ, ಕನ್ನಡದ ದಿಗ್ಗಜರಾದ ಕೆರಿಮನಿ ಅವರು ಶಿರಹಟ್ಟಿ ತಾಲೂಕಾಧ್ಯಕ್ಷರಾಗಿ ಉತ್ಕೃಷ್ಟ ರೀತಿಯ ಕಾರ್ಯ ನಿರ್ವಹಿಸಿದ್ದಾರೆ. ಹೊಸ ಜಿಲ್ಲೆಯಾದ ಸಂದರ್ಭದಲ್ಲಿ ನೂತನ ಅಧ್ಯಕ್ಷರಾಗಿ ಲಕ್ಷ್ಮೇಶ್ವರದಲ್ಲಿ ಸಾಹಿತ್ಯಿಕ ವಾತಾವರಣ ನಿರ್ಮಿಸಿದರು. ಅನೇಕ ಸಾಹಿತಿಗಳಿಗೆ ಮಾರ್ಗದರ್ಶನ ನೀಡಿದರು. ಅನೇಕ ಗ್ರಂಥಗಳು ರಚನೆಯಾದವು ಎಂದು ತಿಳಿಸಿದರು.

ಡಾ. ಜಕಬಾಳ ಡಾ. ಕೆರಿಮನಿಯವರ ಜೊತೆಗಿನ ಒಡನಾಟವನ್ನು ನೆನೆದರು. ಜಿಲ್ಲಾಧ್ಯಕ್ಷ ವಿವೇಕಾನಂದಗೌಡ ಪಾಟೀಲ ಮಾತನಾಡಿ, ಪ್ರೊ. ಸಿ.ವಿ. ಕೆರಿಮನಿ ಅವರು ಕೃತಿಗಳನ್ನು ರಚಿಸುವ ಮೂಲಕ ಕನ್ನಡ ಸಾಹಿತ್ಯಕ್ಕೆ ಅನುಪಮ ಸೇವೆ ಸಲ್ಲಿಸಿದ್ದಾರೆ. ಈ ಬಾರಿಯ ದತ್ತಿ ಪ್ರಶಸ್ತಿಗೆ ಭಾಜನರಾದ ಡಾ. ಎಸ್.ಎಫ್. ಜಕಬಾಳ ಅವರ ಜನಪದ ಸಾಹಿತ್ಯ ಪ್ರಸಾರ ಹಾಗೂ ಪೋಷಣೆಯ ಹಿನ್ನೆಲೆಯಲ್ಲಿ ಉತ್ತಮ ಕಾರ್ಯ ನಿರ್ವಹಿಸಿದ್ದಾರೆಂದು ತಿಳಿಸಿದರು.

ಇದೇ ಸಂದರ್ಭದಲ್ಲಿ ಬಿಜಾಪುರ ಜಿಲ್ಲೆಯ ಆಲಮೇಲ್ ತಾಲೂಕಿನಲ್ಲಿ ನಡೆಯುವ ತಾಲೂಕಾ ಕನ್ನಡ ಸಾಹಿತ್ಯ ಸಮ್ಮೇಳನದ ಅಧ್ಯಕ್ಷರಾಗಿ ಆಯ್ಕೆಯಾದ ಜಿಲ್ಲಾ ಕಸಾಪ ಕಾರ್ಯಕಾರಿ ಸಮಿತಿ ಸದಸ್ಯ ಸಿ.ಕೆ.ಎಚ್. ಶಾಸ್ತ್ರಿ(ಕಡಣಿ) ಹಾಗೂ ಕರ್ನಾಟಕ ಕಾರ್ಯನಿರತ ಸಂಪಾದಕರ ಸಂಘದ ಅಧ್ಯಕ್ಷ ಜಗದೀಶ ಪೂಜಾರ ಇವರನ್ನು ಸನ್ಮಾನಿಸಲಾಯಿತು. ವೇದಿಕೆ ಮೇಲೆ ಲಲಿತಾಕೆರಿಮನಿ ಉಪಸ್ಥಿತರಿದ್ದರು.

ಶಾಂತಲಾ ಹಂಚಿನಾಳ ಪ್ರಾರ್ಥಿಸಿದರು.

ಡಾ. ದತ್ತಪ್ರಸನ್ನ ಪಾಟೀಲ ಡಾ.ಸಿದ್ದಣ್ಣ ಜಕಬಾಳರ ಕುರಿತು ಅಭಿನಂದನಾ ನುಡಿಗಳನ್ನಾಡಿ, ಜನಪದ ಕಲಾ ಪ್ರಕಾರಗಳನ್ನು ಇಂದಿನ ತಲೆಮಾರಿಗೆ ವರ್ಗಾಯಿಸುವ ಮಹತ್ವದ ಕಾರ್ಯವನ್ನು ಮಾಡುತ್ತಿದ್ದಾರೆ. 17ಕ್ಕೂ ಅಧಿಕ ಪುಸ್ತಕಗಳನ್ನು ನೂರಾರು ಲೇಖನಗಳನ್ನು ಬರೆದು ರಾಷ್ಟ್ರ ಹಾಗೂ ರಾಜ್ಯಮಟ್ಟದ ಅನೇಕ ವಿಚಾರಗೋಷ್ಠಿಗಳಲ್ಲಿ ಭಾಗವಹಿಸಿ ನವೀನ ವಿಚಾರಗಳನ್ನು ಮಂಡಿಸಿದ್ದಾರೆಂದು ತಿಳಿಸಿದರು.

ಶಿವಾನಂದ ಗಿಡ್ನಂದಿ ಸ್ವಾಗತಿಸಿದರು. ಈಶ್ವರ ಮೆಡ್ಲೇರಿ ಕಾರ್ಯಕ್ರಮ ನಿರೂಪಿಸಿದರು. ಸೋಮಶೇಖರ ಕೆರಿಮನಿ ವಂದಿಸಿದರು.

ಕಾರ್ಯಕ್ರಮದಲ್ಲಿ ಚಂಬಣ್ಣ ಬಾಳಿಕಾಯಿ, ರಮೇಶ ನವಲೆ, ಎಸ್.ಎಫ್. ಆದಿ, ಕೊತ್ತಲ ಮಹದೇವಪ್ಪ, ಸುರೇಶ ರಾಜನಾಯ್ಕರ, ಜೆ.ಎಸ್. ರಾಮಶೆಟ್ರ, ಗಂಗಾಧರ ಅರಳಿ, ಬಿ.ಎಸ್. ಬಾಳೇಶ್ವರಮಠ, ಸಿ.ಎಂ. ಕಗ್ಗಲಗೌಡ್ರ, ಡಾ. ಎಸ್. ಎಸ್. ವೆಂಕಟಾಪುರ, ಎಸ್.ಎಸ್. ಸೂಳಿಕೇರಿ, ಸಿ.ಎಂ. ಮಾರನಬಸರಿ, ಜಯದೇವ ಮೆಣಸಗಿ, ಶಿಲ್ಪಾ ಮ್ಯಾಗೇರಿ, ಪ್ರತಿಮಾ ಮಹಾಜನಶೆಟ್ಟರ, ಜಯಶ್ರೀ ಮೆಳ್ಳಿಗೇರಿ, ಅಕ್ಕಮಹಾದೇವಿ ಮಳಲಿ, ಮಾಲಾದೇವಿ ದಂದರಗಿ, ನಿರ್ಮಲಾ ಅಡವಿ, ಮಹಾನಂದಾ ಕೊಣ್ಣೂರ, ನಂದಾ ಧರ್ಮಾಯತ, ಅಶ್ವಿನಿ ಅಂಕಲಕೋಟಿ, ಮಂಜುಳಾ ವೆಂಕಟೇಶಯ್ಯ, ಅನಿತಾ ಜಕಬಾಳ, ಶೈಲಜಾ ಗಿಡ್ನಂದಿ, ಉಮಾ ಪಾಟೀಲ, ಶಶಿಕಾಂತ ಕೊರ್ಲಹಳ್ಳಿ, ಬಸವರಾಜ ಗಣಪ್ಪನವರ ಮುಂತಾದವರು ಭಾಗವಹಿಸಿದ್ದರು.

# ನಾನು ಎಸ್.ಎಂ. ಕೃಷ್ಣ ಅವರ ಅಭಿಮಾನಿ: ಸಿಎಂ

■ ವಿಜಯಸಾಕ್ಷಿ ಸುದ್ದಿ, ಬೆಳಗಾವಿ-ಸುವರ್ಣಸೌಧ



ತಾವು ವಿದ್ಯಾರ್ಥಿಯಾಗಿದ್ದ ಸಂದರ್ಭದಲ್ಲಿ ಎಸ್.ಎಂ. ಕೃಷ್ಣ ಅವರ ಅಭಿಮಾನಿಯಾಗಿದ್ದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದರು. ಬೆಳಗಾವಿಯ ಸುವರ್ಣಸೌಧದಲ್ಲಿ ನಡೆಯುತ್ತಿರುವ ಅಧಿವೇಶನದ ಸಂದರ್ಭದಲ್ಲಿ ಮಾಜಿ ಮುಖ್ಯಮಂತ್ರಿ ಎಸ್.ಎಂ. ಕೃಷ್ಣ ಅವರ ನಿಧನಕ್ಕೆ ಸಂತಾಪ ಸೂಚಿಸಿ ಅವರು ಮಾತನಾಡಿದರು. 1968ರಲ್ಲಿ ಲೋಕಸಭಾ ಸ್ಥಾನಕ್ಕೆ ಪ್ರಜಾ ಸೋಷಿಯಲಿಸ್ಟ್ ಪಾರ್ಟಿಯಿಂದ ಎಸ್.ಎಂ.ಕೃಷ್ಣ ಅವರು ಸ್ಪರ್ಧಿಸಿದ್ದರು. ಇವರನ್ನು ಬೆಂಬಲಿಸಿ ಮಂಡ್ಯ ವಿದ್ಯಾರ್ಥಿ ಬಳಗದಿಂದ ಮೈಸೂರಿನ ಟೌನ್ ಹಾಲ್‌ನಲ್ಲಿ ಸಭೆ ಕರೆಯಲಾಗಿತ್ತು. ಈ ಸಭೆಯಲ್ಲಿ ಅವರನ್ನು ಬೆಂಬಲಿಸಿದ್ದೆ. ನಂತರ ಲೋಹಿಯಾ ಅವರ ಸಮಾಜವಾದಿ ಪಕ್ಷ ಸೇರ್ಪಡೆಯಾದೆ. ಎಸ್.ಎಂ. ಕೃಷ್ಣ ಅವರು, 1962ರಲ್ಲೇ ಸ್ವತಂತ್ರವಾಗಿ ವಿಧಾನಸಭೆಗೆ ಸ್ಪರ್ಧಿಸಿದ್ದರು. 2005ರಲ್ಲಿ ಎಸ್.ಎಂ. ಕೃಷ್ಣ ಅವರು ಮಹಾರಾಷ್ಟ್ರದ ರಾಜ್ಯಪಾಲರಾಗಿದ್ದಾಗ ಮುಂಬೈನಲ್ಲಿ ಭೇಟಿಯಾಗಿ ಕಾಂಗ್ರೆಸ್ ಸೇರುವ ತೀರ್ಮಾನವನ್ನು ಅವರಿಗೆ ತಿಳಿಸಿದೆ. ಅವರು ನನ್ನ ತೀರ್ಮಾನವನ್ನು ಸ್ವಾಗತಿಸಿದ್ದರು. ಒಳ್ಳೆ ಸಂಸದೀಯ ಪಟು, ಎಲ್ಲರನ್ನೂ ಗೌರವದಿಂದ ಕಾಣುತ್ತಿದ್ದರು. ಯಾವತ್ತೂ ದ್ವೇಷದ ರಾಜ-ಕಾರಣ ಮಾಡಿದವರಲ್ಲ. ಸಿಂಗಾಪುರದಂತೆ ಬೆಂಗಳೂರನ್ನು ಅಂತಾರಾಷ್ಟ್ರೀಯ ಮಟ್ಟಕ್ಕೆ ಏರಿಸುವ ಕನಸು ಹೊಂದಿದ್ದರು. ಬೆಂಗಳೂರಿಗೆ ಸಿಲಿಕಾನ್ ವ್ಯಾಲಿ ಆಫ್ ಇಂಡಿಯಾ ಎನ್ನುವ ಹೆಗ್ಗಳಿಕೆ ಬರಲು ಎಸ್.ಎಂ. ಕೃಷ್ಣ ಅವರ ಕೊಡುಗೆ ಅಪಾರ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಸ್ಮರಿಸಿದರು.

# ಸರ್ಕಾರಿ ಗೌರವಗಳೊಂದಿಗೆ ಪಂಚಭೂತಗಳಲ್ಲಿ ಲೀನರಾದ ಎಸ್.ಎಂ. ಕೃಷ್ಣ!

■ ವಿಜಯಸಾಕ್ಷಿ ಸುದ್ದಿ, ಮಂಡ್ಯ

ವಯೋಸಹಜ ಕಾಯಿಲೆಯಿಂದ ಬುಧವಾರ ನಿಧನ ಹೊಂದಿದ್ದ ಮಾಜಿ ಮುಖ್ಯಮಂತ್ರಿ ಎಸ್ ಎಂ ಕೃಷ್ಣ ಅವರ ಅಂತ್ಯಕ್ರಿಯೆ ಬುಧವಾರ ಸಕಲ ಸರ್ಕಾರಿ ಗೌರವದೊಂದಿಗೆ ಅವರ ಹುಟ್ಟೂರಿನಲ್ಲಿ ಜರುಗಿತು.ಎಸ್ ಎಂ ಕೃಷ್ಣ ಅವರ ಅಂತ್ಯಕ್ರಿಯೆ ಸರ್ಕಾರಿ ಗೌರವಗಳೊಂದಿಗೆ ಹುಟ್ಟೂರಾದ ಸೋಮನಹಳ್ಳಿಯಲ್ಲಿ ಒಕ್ಕಲಿಗ ಸಂಪ್ರದಾಯದಂತೆ ನಡೆಯಿತು. ಬಳಿಕ ಮೊಮ್ಮಗ ಅಮರ್ತ್ಯ ಹೆಗ್ಡೆ, ತಮ್ಮ ಅಜ್ಜ ಎಸ್.ಎಂ.ಕೃಷ್ಣ ಅವರ ಚಿತೆಗೆ ಅಗ್ನಿ ಸ್ಪರ್ಶ ಮಾಡಿದರು. ಈ ಮೂಲಕ ರಾಜಕೀಯ ಮುತ್ಸದಿ ಎಸ್‌ಎಂಕೆ ಪಂಚಭೂತಗಳಲ್ಲಿ ಲೀನರಾದರು.ಅಗ್ನಿ ಸ್ಪರ್ಶಕ್ಕೂ ಮುನ್ನ ಎಸ್‌ಎಂಕೆ ಕೃಷ್ಣ ಅವರ ಚಿತೆಗೆ ಪತ್ನಿ ಪ್ರೇಮಾ, ಪುತ್ರಿಯರು, ಸಂಬಂಧಿಕರು ಗಂಧದ ಕಟ್ಟಿಗೆ ಇಟ್ಟು ವಿದಾಯ ಹೇಳಿದರು. ಬಳಿಕ ಮಂಡ್ಯ ಜಿಲ್ಲಾ ಪೊಲೀಸ್ ಇಲಾಖೆಯಿಂದ ಮೃತರ ಗೌರವಾರ್ಥವಾಗಿ ಮೂರು ಸುತ್ತು ಕುಶಾಲ ತೋಪು ಸಿಡಿಸಿ ಗೌರವ ಸಲ್ಲಿಸಲಾಯಿತು. ಪಾರ್ಥಿವ ಶರೀರದ ಮೇಲೆ ಹೊದಿಸಲಾಗಿದ್ದ ತ್ರಿವರ್ಣ ಧ್ವಜವನ್ನು ಗೌರವ ಪೂರ್ವಕವಾಗಿ ಎಸ್.ಎಂ.ಕೃಷ್ಣ ಅವರ ಪತ್ನಿ ಪ್ರೇಮಾ ಅವರಿಗೆ ಹಸ್ತಾಂತರಿಸಲಾಯಿತು.



ಗದಗ ನಗರದ ಜನತಾ ಬಜಾರ ಮಾರ್ಕೆಟ್‌ನಲ್ಲಿ ಸೋನಿಯಾ ಗಾಂಧೀಯವರ ಜನ್ಮದಿನವನ್ನು ಗದಗ ಜಿಲ್ಲಾ ಅಲ್ಪಸಂಖ್ಯಾತರ ಘಟಕದ ವತಿಯಿಂದ ಆಚರಿಸಲಾಯಿತು. ಈ ಸಂದರ್ಭದಲ್ಲಿ ಗದಗ ಜಿಲ್ಲಾ ಅಲ್ಪಸಂಖ್ಯಾತ ಘಟಕದ ಅಧ್ಯಕ್ಷ ಉಮರ ಫಾರುಕ ಹುಬ್ಬಳ್ಳಿ, ಜನತಾ ಬಜಾರ ಅಧ್ಯಕ್ಷ ಶಿವಾನಂದ ಮಾದಣ್ಣವರ, ಅನ್ವರ ಶಿರಹಟ್ಟಿ, ಜಾಫರ ಡಾಲಾಯತ್, ಶಂಕರಗೌಡ್ರ ರಾಯನಗೌಡ್ರ, ವೀರಯ್ಯ ಬರದೂರಮಠ, ಕಿಶೋರ ಮಾದಣ್ಣವರ, ಕೃಷ್ಣ ಮಾದಣ್ಣವರ ಮುಂತಾದವರು ಉಪಸ್ಥಿತರಿದ್ದರು.

### ವಿಶೇಷ ಸಹಕಾರ ತರಬೇತಿ ಕಾರ್ಯಕ್ರಮದಲ್ಲಿ ಜಿ.ಪಿ. ಪಾಟೀಲ

# ಗ್ರಾಮಸ್ಥರ ಆರ್ಥಿಕ ಸ್ಥಿತಿಯಲ್ಲಿ ಹೆಚ್ಚಳ

■ ವಿಜಯಸಾಕ್ಷಿ ಸುದ್ದಿ, ಗದಗ

ಪಿಎಸಿಎಸ್‌ನ 13 ಕೋಟಿ ರೈತ ಸದಸ್ಯರು ಸೇರಿದಂತೆ ಇದು ಪಿಎಸಿಎಸ್‌ನ ವ್ಯಾಪಾರ ಚಟುವಟಿಕೆಗಳನ್ನು ಹೆಚ್ಚಿಸುತ್ತಿದೆ, ಅವುಗಳನ್ನು ಸ್ವಾವಲಂಬಿ ಆರ್ಥಿಕ ಘಟಕಗಳಾಗಲು ಸಹಾಯ ಮಾಡುತ್ತದೆ. ಮೊದಲ ಹಂತದಲ್ಲಿ 63000 ಪಿಎಸಿಎಸ್‌ನ್ನು ಸಿಎಸ್ಸಿಗಳಾಗಿ ಕೆಲಸ ಮಾಡಲು ತರಬೇತಿ ನೀಡಲಾಗುತ್ತಿದೆ. ಎರಡನೇ ಹಂತದಲ್ಲಿ 30000 ಪಿಎಸಿಎಸ್‌ಗೆ ತರಬೇತಿ ನೀಡಲಾಗುತ್ತದೆ ಎಂದು ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳದ ನಿರ್ದೇಶಕ ಜಿ.ಪಿ. ಪಾಟೀಲ ತಿಳಿಸಿದರು.

ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳ ಬೆಂಗಳೂರು, ಗದಗ ಜಿಲ್ಲಾ ಸಹಕಾರ ಯೂನಿಯನ್, ಸಹಕಾರ ಇಲಾಖೆ ಗದಗ ಇವರುಗಳ ಸಂಯುಕ್ತ ಆಶ್ರಯದಲ್ಲಿ ರೋಣ ಹಾಗೂ ಗಜೇಂದ್ರಗಡ ತಾಲೂಕಿನ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಗಳ ಅಧ್ಯಕ್ಷರು, ಉಪಾಧ್ಯಕ್ಷರು ಹಾಗೂ ಮುಖ್ಯ ಕಾರ್ಯನಿರ್ವಾಹಕರುಗಳಿಗೆ ರಾಜ್ಯ ಮಟ್ಟದ



ವಿಶೇಷ ಸಹಕಾರ ತರಬೇತಿ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳದ ನಿರ್ದೇಶಕ ಬಾಪುಗೌಡ ಡಿ.ಪಾಟೀಲ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿ, ಸಾಮಾನ್ಯ ಸೇವಾ ಕೇಂದ್ರಗಳು ದೇಶದ ಗ್ರಾಮೀಣ ಮತ್ತು ದೂರದ ಪ್ರದೇಶಗಳಲ್ಲಿನ ನಾಗರಿಕರಿಗೆ ಬಿ2ಸಿ ಸೇವೆಗಳನ್ನು, ಆರೋಗ್ಯ, ಹಣಕಾಸು, ಶಿಕ್ಷಣ ಮತ್ತು ಕೃಷಿ ಸೇವೆಗಳನ್ನು ತಲಿಪಿಸಲು ಪ್ರವೇಶ ಕೇಂದ್ರಗಳಾಗಿವೆ. ಇದು ದೇಶದ ಪ್ರಾದೇಶಿಕ, ಭೌಗೋಳಿಕ, ಭಾಷಾ ಮತ್ತು ಸಾಂಸ್ಕೃತಿಕ ವೈವಿಧ್ಯತೆಯನ್ನು ಪೂರೈಸುವ ಪ್ಯಾನ್ ಇಂಡಿಯಾ ನೆಟ್‌ವರ್ಕ್ ಆಗಿದ್ದು, ಸಾಮಾಜಿಕವಾಗಿ, ಆರ್ಥಿಕವಾಗಿ ಮತ್ತು ಡಿಜಿಟಲ್ ಅಂತರ್ಗತ ಸಮಾಜದ ಸರ್ಕಾರದ ಆದೇಶವನ್ನು ಸಕ್ರಿಯಗೊಳಿಸುತ್ತದೆ ಎಂದು ಹೇಳಿದರು.

ಬಸವರಾಜ ಅರಬಗೊಂಡ ಮಾತನಾಡುತ್ತ, ಆರ್.ಬಿ.ಐ/ನಬಾರ್ಡ್ ಜೀವನೋಪಾಯದ ಚಟುವಟಿಕೆಗಳನ್ನು ನಡೆಸುವ ಮೂಲಕ ಗ್ರಾಮಸ್ಥರ ಆರ್ಥಿಕ ಸ್ಥಿತಿಯನ್ನು ಹೆಚ್ಚಿಸುವುದು ಉದ್ದೇಶವಾಗಿದೆ. ಪಿಎಸಿಎಸ್ ಬುಡಕಟ್ಟು ಸದಸ್ಯರಿಗೆ ಕೃಷಿ ಮತ್ತು ಕೃಷಿಗಾಗಿ ಬಡ್ಡಿ ರಹಿತ ಸಾಲ ಅಥವಾ ಕೃಷಿ ಸಾಲಗಳನ್ನು ಒದಗಿಸುತ್ತದೆ ಎಂದು ಹೇಳಿದರು.

ಕೆ.ಸಿ.ಸಿ.ಬ್ಯಾಂಕ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಸಿನಿತಾ ಸಿದ್ರಾಮ್ ಮಾತನಾಡುತ್ತಾ, ಈ ಉಪಕ್ರಮದ ಮೂಲಕ ಸಾಮಾನ್ಯ ನಾಗರಿಕರ ಜೀವನ ಸೌಕರ್ಯವನ್ನು ಸುಧಾರಿಸುತ್ತದೆ. ಸಹಕಾರ ವಲಯವು ವಿಶೇಷವಾಗಿ ಗ್ರಾಮೀಣ ಪ್ರದೇಶದಲ್ಲಿ ಅದರಲ್ಲಿಯೂ ರೈತರು ಹಾಗೂ ಹೈನುಗಾರರ ಬದುಕಿನ ಆಸರೆಯಾಗಿ ಕಾರ್ಯನಿರ್ವಹಿಸುತ್ತಿದೆ ಎಂದರು.

ಕೆ.ಸಿ.ಸಿ. ಬ್ಯಾಂಕಿನ ಅಧ್ಯಕ್ಷ ಶಿವಕುಮಾರಗೌಡ ಎಸ್.ಪಾಟೀಲ ಮಾತನಾಡುತ್ತಾ, ಸಾಮಾನ್ಯ ಸೇವಾ ಕೇಂದ್ರಗಳನ್ನು ಪಿಎಸಿಎಸ್ ಮೂಲಕ ಗ್ರಾಮೀಣ ಜನರಿಗೆ ಲಭ್ಯವಾಗುವಂತೆ ಮಾಡುವುದು ಈ ಉಪಕ್ರಮದ ಉದ್ದೇಶವಾಗಿದೆ ಎಂದು ಹೇಳಿದರು. ಮಹಾಮಂಡಳದ ಸಹಕಾರ ಶಿಕ್ಷಣಾಧಿಕಾರಿ ಶರಣಬಸಪ್ಪ ಜಿ.ಕಾಟ್ರಳ್ಳಿ ಮಹಾಮಂಡಳದ ಕಾರ್ಯಚಟುವಟಿಕೆಗಳು ಹಾಗೂ ಕಾರ್ಯಕ್ರಮದ ಉದ್ದೇಶ ಕುರಿತು ಮಾತನಾಡಿ ಸ್ವಾಗತಿಸಿದರು. ಎಚ್.ಜಿ. ಹಿರೇಗೌಡ್ರ, ಸಿ.ಎಂ. ಪಾಟೀಲ, ವಾಯ್.ಎಫ್. ಪಾಟೀಲ, ನಿಂಗನಗೌಡ ಎಂ.ಮರಿಗೌಡ್ರ, ಎಸ್.ಎಸ್. ಕಬಾಡೆ, ಅರವಿಂದ ಎನ್.ನಾಗಜ್ಜನವರ, ಎಂ.ಎಫ್. ಕಲಗುಡಿ, ಸಿ.ಕೆ. ಮಾಳಶೆಟ್ಟಿ, ಎಸ್.ಜಿ. ಆಲದಕಟ್ಟಿ ಉಪಸ್ಥಿತರಿದ್ದರು.

ಲೆಕ್ಕಪತ್ರಗಳ ನಿರ್ವಹಣೆ ಮತ್ತು ಲೆಕ್ಕಪರಿಶೋಧನೆಗೆ ಪೂರ್ವ ಸಿದ್ಧತೆ ಕುರಿತು ಜಿ.ಕೆ. ರಾಮಪ್ಪ, ಸಹಕಾರಿ ಕಾಯಿದೆ ಮುಖ್ಯಾಂಶಗಳು ಹಾಗೂ ಇತ್ತೀಚಿನ ತಿದ್ದುಪಡಿಗಳ ಕುರಿತು ಪ್ರಶಾಂತ ಮುಧೋಳ, ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಗಳಲ್ಲಿ ಗಣಕೀಕರಣ ಹಾಗೂ ಸಾಮಾನ್ಯ ಸೇವಾ ಕೇಂದ್ರದ (ಸಿಎಸ್‌ಸಿ) ಸೌಲಭ್ಯಗಳ ಕುರಿತು, ಅದೆಪ್ಪ ಉಪನ್ಯಾಸ ನೀಡಿದರು.

ಶಂಕ್ರಪ್ಪ ರಾ. ಸಂಕಣ್ಣವರ ಪ್ರಾರ್ಥಿಸಿದರು. ಶೇಖರ ಎಸ್.ಕರಿಯಪ್ಪನವರ ನಿರೂಪಿಸಿ, ವಂದಿಸಿದರು.

# ಸಿಐಟಿಯುನಿಂದ ಮತ ಪ್ರದರ್ಶನ

■ ವಿಜಯಸಾಕ್ಷಿ ಸುದ್ದಿ, ಗದಗ

ರಾಜ್ಯ ಸರಕಾರಗಳ ಮೇಲೆ ಜನವಿರೋಧಿ ನವಉದಾರೀಕರಣ ನೀತಿಗಳನ್ನು ಜಾರಿಗೊಳಿಸಲು ಒತ್ತಾಯ ಹೇರುವ ಮೂಲಕ ದೇಶದ ಒಕ್ಕೂಟ ವ್ಯವಸ್ಥೆಯ ನೀತಿಗಳನ್ನು ಉಲ್ಲಂಘಿಸಿ ರಾಜ್ಯ ಸರಕಾರಕ್ಕೆ ನೀಡುತ್ತಿರುವ ಸರ್ವಾಧಿಕಾರಿ ಒತ್ತಡ ನೀಡುತ್ತಿರುವ ಕೇಂದ್ರದ ಮೋದಿ ನೇತೃತ್ವದ ಸರಕಾರದ ಕ್ರಮಗಳು ಖಂಡನೀಯವಾಗಿವೆ ಎಂದು ಸಿಐಟಿಯು ರಾಜ್ಯ ಕಾರ್ಯದರ್ಶಿ ಮಹೇಶ ಪತ್ತಾರ ಹೇಳಿದರು.

ಕೇಂದ್ರ ಸರಕಾರದ ಒಕ್ಕೂಟ ವಿರೋಧಿ ನೀತಿಗಳನ್ನು ಖಂಡಿಸಿ ಹಾಗೂ ಕೇರಳದ ಎಡರಂಗ ಸರಕಾರದ ಜನಪರ ಆಡಳಿತ




ಬೆಂಬಲಿಸಿ ಬುಧವಾರ ಗದಗ ನಗರದ ಗಾಂಧಿ ವೃತ್ತದಲ್ಲಿ ಸಿಐಟಿಯು ಗದಗ ಜಿಲ್ಲಾ ಸಮಿತಿ ನಡೆಸಿದ ಮತಪ್ರರ್ಶನದಲ್ಲಿ ಅವರು ಮಾತನಾಡಿದರು. ಕೇರಳದ ಪಿನರಾಯಿ ವಿಜಯನ್ ನೇತೃತ್ವದ ಎಡರಂಗ ಸರಕಾರ ತನ್ನ ಸೀಮಿತ ಸಂಪನ್ಮೂಲಗಳನ್ನು ಬಳಸಿಕೊಂಡು ಆರೋಗ್ಯ, ಶಿಕ್ಷಣ ಪಂಚಾಯತ ರಾಜ್ಯ ವಸತಿ ಸಾಮಾಜಿಕ ಭದ್ರತೆ ಮುಂತಾದ ಕ್ಷೇತ್ರಗಳಲ್ಲಿ ಅಭಿವೃದ್ಧಿ ಸಾಧಿಸುವುದರೊಂದಿಗೆ ದೇಶದಲ್ಲಿ ನಂ.1 ಸರಕಾರ ಎಂಬ ಹೆಗ್ಗಳಿಕೆಗೆ ಪಾತ್ರವಾಗಿದೆಯಲ್ಲದೆ ಭ್ರಷ್ಟಾಚಾರ ರಹಿತ ಸರಕಾರವಾಗಿದೆ ಎಂದರು.

ಪ್ರತಿಭಟನೆಯಲ್ಲಿ ಜಿಲ್ಲಾ ಸಂಚಾಲಕ ಮಹೇಶ ಹಿರೇಮಠ, ಮುಖಂಡರಾದ ಶಾರದಾ ರೋಣದ, ಬಸವರಾಜ ಮಂತೂರ, ಮಾರುತಿ ಚಿಟಗಿ, ಯಶೋಧಾ ಬೆಟಗೇರಿ, ಸುಶೀಲಾ ಚಲವಾದಿ, ರುದ್ರಪ್ಪ ಕಂದಗಲ್ಲ, ಬಸವರಾಜ ಮೇವುಂಡಿ, ದೇವಪ್ಪ ಕಲ್ಮನಿ, ಗೀತಾ ಪಾಟೀಲ, ಗಂಗವ್ವ ದೇವರಡ್ಡಿ, ಲಕ್ಷ್ಮೀ ಗಾಯಕವಾಡ, ಮಂಗಲಾ ಪಟ್ಟಣಶೆಟ್ಟಿ ಮುಂತಾದವರಿದ್ದರು.

### ಮಾಜಿ ಮುಖ್ಯಮಂತ್ರಿ ಎಸ್.ಎಂ.ಕೃಷ್ಣ ನಿಧನ

# ವಿಧಾನ ಸಭೆಯಲ್ಲಿ ಸಂತಾಪ ಸೂಚನೆ

■ ವಿಜಯಸಾಕ್ಷಿ ಸುದ್ದಿ, ಬೆಳಗಾವಿ-ಸುವರ್ಣ ವಿಧಾನಸೌಧ

ಡಿ.10ರಂದು ಮುಂಜಾನೆ ನಿಧನರಾದ ರಾಜ್ಯದ ಮಾಜಿ ಮುಖ್ಯಮಂತ್ರಿ ಎಸ್.ಎಂ. ಕೃಷ್ಣ ಅವರಿಗೆ ವಿಧಾನ ಸಭೆಯಲ್ಲಿ ಸಂತಾಪ ಸೂಚಿಸಲಾಯಿತು.

ಬೆಳಗಾವಿ ಸುವರ್ಣ ಸೌಧದಲ್ಲಿ ಜರುಗುತ್ತಿರುವ ಚಳಿಗಾಲದ ಅಧಿವೇಶನದ ಎರಡನೆ ದಿನವಾದ ಮಂಗಳವಾರ ಸಭಾಧ್ಯಕ್ಷ ಯು.ಟಿ. ಖಾದರ್ ಸಂತಾಪ ಸೂಚನೆ ನಿರ್ಣಯವನ್ನು ಮಂಡಿಸಿ ಚರ್ಚೆಗೆ ಅವಕಾಶ ನೀಡಿದರು.

ಈ ವೇಳೆ ಮಾತನಾಡಿದ ಸಭಾಧ್ಯಕ್ಷ ಯು.ಟಿ. ಖಾದರ್, ವೃತ್ತಿಯಲ್ಲಿ ವಕೀಲರಾಗಿದ್ದ ಎಸ್.ಎಂ. ಕೃಷ್ಣ ಅವರು ಕಾನೂನು ಕಾಲೇಜಿನಲ್ಲಿ ಪ್ರೊಫೆಸರ್ ಆಗಿಯೂ ಕಾರ್ಯನಿರ್ವಹಿಸಿದ್ದರು. 1962ರಲ್ಲಿ ಪ್ರಥಮ ಬಾರಿಗೆ ವಿಧಾನಸಭೆಗೆ ಆಯ್ಕೆಯಾಗಿದ್ದ ಅವರು ನಂತರ 1989ರಲ್ಲಿ 9ನೇ ವಿಧಾನಸಭೆಗೆ 1999 ರಲ್ಲಿ 11ನೇ ವಿಧಾನಸಭೆಗೆ ಹಾಗೂ 2004ರಲ್ಲಿ 12ನೇ ವಿಧಾನಸಭೆಗೆ ಪುನರಾಯ್ಕೆಗೊಂಡಿದ್ದರು. ನಂತರ ಅವರು 1972ರಲ್ಲಿ ವಿಧಾನ ಪರಿಷತ್ತಿನ ಸದಸ್ಯರಾಗಿ ಆಯ್ಕೆಗೊಂಡಿದ್ದು, 1996ರಿಂದ 1999 ಮತ್ತು 2008ರಿಂದ 2014ರ ಅವಧಿಯಲ್ಲಿ ರಾಜ್ಯಸಭಾ ಸದಸ್ಯರಾಗಿಯೂ ಕಾರ್ಯನಿರ್ವಹಿಸಿದ್ದರು ಎಂದು ಸದನಕ್ಕೆ ತಿಳಿಸಿದರು. ಎಸ್.ಎಂ. ಕೃಷ್ಣ ಅವರು ಎಂದಿಗೂ ದ್ವೇಷದ ರಾಜಕಾರಣ ಮಾಡಲಿಲ್ಲ. ಅವರು ಅಲಂಕರಿಸಿದ ಎಲ್ಲ ಉನ್ನತ ಸ್ಥಾನಗಳಿಗೂ ಗೌರವ ತಂದರು. ಗ್ರಾಮೀಣ ಭಾಗದ ಯುವಜನರಿಗೆ ಕಿಯೋನಿಕ್ಸ್ ಮೂಲಕ ಕಂಪ್ಯೂಟರ್ ಶಿಕ್ಷಣ ನೀಡಿದರು. ನಾವು ಹುಟ್ಟಿದಾಗ ಹೆಸರು ಇರುವುದಿಲ್ಲ. ಆದರೆ ಉಸಿರು ಇರುತ್ತದೆ. ಸತ್ತ ನಂತರ ಉಸಿರು ಇರುವುದಿಲ್ಲ, ಹೆಸರು ಮಾತ್ರ ಇರುತ್ತದೆ. ಈ ಹೆಸರು ಶಾಶ್ವತವಾಗಿ ಉಳಿಯುವಂತೆ ಬದುಕು ನಡೆಸಬೇಕು. ಈ ರೀತಿಯಾಗಿ ಬದುಕಿ ತಮ್ಮ ಹೆಸರನ್ನು ಶಾಶ್ವತವಾಗಿಸಿದವರು ಎಸ್.ಎಂ. ಕೃಷ್ಣ ಎಂದು ಸಭಾಧ್ಯಕ್ಷ ಯು.ಟಿ. ಖಾದರ್ ಅಭಿಪ್ರಾಯ ವ್ಯಕ್ತಪಡಿಸಿದರು.

# ಶಾಲೆಗಳು ಮಕ್ಕಳ ಪ್ರಗತಿಯ ಕೇಂದ್ರಗಳು

■ ವಿಜಯಸಾಕ್ಷಿ ಸುದ್ದಿ, ಗದಗ

ಸರ್ಕಾರಿ ಶಾಲೆಗಳಲ್ಲಿ ಪಾಲಕ-ಪೋಷಕರ ಸೂಕ್ತ ಸಲಹೆ ಸೂಚನೆಗಳಿಗೆ ಮುಕ್ತ ಅವಕಾಶವಿದ್ದು, ವಿದ್ಯಾರ್ಥಿಗಳ ಶೈಕ್ಷಣಿಕ ಅಭಿವೃದ್ಧಿಯ ಚಿಂತನೆಯೇ ನಮ್ಮೆಲ್ಲರ ಗುರಿಯಾಗಿರಲಿ. ಶಾಲೆಗಳು ಮಕ್ಕಳ ಪ್ರಗತಿಯ ಕೇಂದ್ರಗಳಾಗಿವೆ ಎಂದು ಸಂಪನ್ಮೂಲ ವ್ಯಕ್ತಿ ಕವಿತಾ ಬೇಲೇರಿ ಹೇಳಿದರು.

ಅವರು ಗದುಗಿನ ಸರ್ಕಾರಿ ಶಾಲೆ ನಂ 15ರಲ್ಲಿ ಜರುಗಿದ ಪಾಲಕರ ಸಭೆಯನ್ನುದ್ದೇಶಿಸಿ ಮಾತನಾಡಿ, ಮಕ್ಕಳ ಶೈಕ್ಷಣಿಕ ಹಿತದೃಷ್ಟಿಯಿಂದ ನಾವು ಮಾಡಬೇಕಾದ ಕೆಲಸ-ಕಾರ್ಯಗಳ ಕುರಿತು ಚಿಂತನೆ ನಡೆಯಲಿ. ಪ್ರತಿದಿನ ಮಕ್ಕಳು ಶಾಲೆಗೆ ಬರಬೇಕು. ಯಾವ ಮಗುವೂ ಶಾಲೆಯಿಂದ ಹೊರಗುಳಿಯದಂತೆ ಕಾಳಜಿ ವಹಿಸಬೇಕು. ಸರ್ಕಾರದ ಸೌಲಭ್ಯಗಳು ವಿದ್ಯಾರ್ಥಿಗಳನ್ನು ತಲುಪುತ್ತಿದ್ದು ಮಕ್ಕಳು ಅವುಗಳನ್ನು ಸದ್ಬಳಕೆ ಮಾಡಿಕೊಳ್ಳಲಿ ಎಂದರು.



ಶಾಲಾ ಎಸ್.ಡಿ.ಎಂ.ಸಿ ಅಧ್ಯಕ್ಷೆ ಶೋಭಾ ಬಸವಾ ಮಾತನಾಡಿ, ಮಕ್ಕಳ ಕಲಿಕೆಗೆ ನಾವೆಲ್ಲರೂ ಪೂರಕವಾಗಿ ಕಾರ್ಯ ನಿರ್ವಹಿಸಬೇಕು. ಶಾಲೆಗಳು ಮಕ್ಕಳಲ್ಲಿ ಆತ್ಮ ವಿಶ್ವಾಸವನ್ನು ಹೆಚ್ಚಿಸುತ್ತವೆ ಎಂದರು.

ದೀಪಿಕಾ ಮರಬದ ಹಾಗೂ ಕಾಂಚನಾ ಮುಧೋಳ ಪ್ರಾರ್ಥಿಸಿದರು. ಮುಖ್ಯೋಪಾಧ್ಯಾಯೆ ವ್ಹಿ.ಎಸ್. ಬಸಾಪೂರ ಸ್ವಾಗತಿಸಿದರು. ಪಿ.ಎಸ್. ಬ್ಯಾಳಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಬಿ.ಯಶೋಧಾ ನಿರೂಪಿಸಿದರು. ವ್ಹಿ.ಬಿ. ಕರಬಸಗೌಡ್ರ ವಂದಿಸಿದರು.

ಕಾರ್ಯಕ್ರಮದಲ್ಲಿ ಶಾಲಾ ಎಸ್.ಡಿ.ಎಂ.ಸಿ ಸದಸ್ಯರು ಸೇರಿದಂತೆ ಅತಿಥಿ ಶಿಕ್ಷಕಿ ಶೋಭಾ ವಗ್ಗಿ, ಆಸ್ಮಾ ಬಾಗಲಕೋಟಿ, ಶಾರದಾ ಮೊರಬದ, ಕೋಮಲಾ ರಾಯಬಾಗಿ, ಲಲಿತಾ ಮಿಸ್ಕಿನ್, ಕಾವ್ಯ ಮಡಿವಾಳರ, ಸುರೇಶ ದಹಿಂಡೆ, ರಚನಾ ಪಾಟೀಲ, ಮಂಗಲಾ ಯಂಡಿಗೇರಿ, ಮಲ್ಲಮ್ಮ ಭಜಂತ್ರಿ, ಉದಯಕುಮಾರ ಚಿಮ್ಮಲಗಿ, ಮಲ್ಲೇಶ ಮುಧೋಳ, ರಾಮಪ್ಪ ಕೊರವರ, ಸರೋಜಾ ಪೂಜಾರ, ಅರವಿಂದ ಕಿರೇಸೂರ, ಮಂಜುನಾಥ, ಶುಭಂ ಕಾಟವಾ, ಹಸೀನಾ ಅಥೋನಿ, ಶಾಂತಾ ಮಾದರ ಸಲಹೆ-ಸೂಚನೆ ನೀಡಿದರು.

# ಪ್ಯಾಲೆಸ್ತೀನ್ ಪರ ಪ್ರಬಂಧ: ಭಾರತೀಯ ವಿದ್ಯಾರ್ಥಿ ಅಮಾನತು

■ ವಿಜಯಸಾಕ್ಷಿ ಸುದ್ದಿ, ಅಮೆರಿಕ

ಪ್ಯಾಲೆಸ್ತೀನ್ ಪರವಾಗಿ ಪ್ರಬಂಧ ಬರೆದಿದ್ದಕ್ಕೆ ಭಾರತೀಯ ಸಂಶೋಧನ ವಿದ್ಯಾರ್ಥಿ ಪ್ರಹ್ಲಾದ್ ಅಯ್ಯಂಗಾರ್ ಅವರನ್ನು ಅಮೆರಿಕದ ಮ್ಯಾಸಚೂಸೆಟ್ಸ್ ಇನ್ಸ್ಟಿಟ್ಯೂಟ್ ಆಫ್ ಟೆಕ್ನಾಲಜಿಯಲ್ಲಿ (ಎಂಐಟಿ) ಅಮಾನತು ಮಾಡಿದ್ದು, ಸಂಸ್ಥೆಯ ನಿರ್ಧಾರದ ವಿರುದ್ಧ ಆಕ್ರೋಶ ವ್ಯಕ್ತವಾಗಿದೆ.


ಕರ್ನಾಟಕ ಸರಕಾರ

**ಗ್ರಾಮ ಪಂಚಾಯತ ಕಾರ್ಯಾಲಯ ಕೊಣ್ಣೂರ**

ತಾ॥ ನರಗುಂದ 582206 ಜಿ ॥ ಗದಗ

ಮೊ : 9148065146, ಇ-ಮೇಲ್ konnur.nar.gdg@gmail.com

ಕ್ರ.ಸಂ.ಗ್ರಾ.ಪಂ.ಕೊ/ MGNREGA-TENDER/2024-25/2 ದಿನಾಂಕ :10/12/2024

**ಕೆಪಿಪಿ ಪೋರ್ಟಲ್ ಟೆಂಡರ್ ಪ್ರಕಟಣೆ**

ಕರ್ನಾಟಕ ಸಾರ್ವಜನಿಕ ಪಾರದರ್ಶಕತೆ ಆಕ್ಟ್-2000 ನಿಯಮಗಳನ್ವಯ ಅರ್ಹ ಗುತ್ತಿಗೆದಾರ/ಸರಬರಾಜುದಾರರಿಂದ ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳ ಪೋರ್ಟಲ್ ಮುಖಾಂತರ 01 ಕಾಮಗಾರಿಯ ಗುಣಮಟ್ಟದ ಸಾಮಗ್ರಿ ಪೂರೈಕೆಯ ಟೆಂಡರನ್ನು ಆಹ್ವಾನಿಸಲಾಗಿದೆ. ಲೆಕ್ಕ ಶೀರ್ಷಿಕೆ: 2024-25ನೇ ಸಾಲಿನ MGNREGA ಯೋಜನೆಯಡಿ ಟೆಂಡರನ್ನು ಆಹ್ವಾನಿಸಲಾಗಿದೆ. ಗುತ್ತಿಗೆದಾರ/ಸರಬರಾಜುದಾರರು ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳ ಪೋರ್ಟಲ್ http://kppp.karnataka.gov.in ಮುಖಾಂತರ ಭಾಗವಹಿಸಬಹುದು. ಕಾಮಗಾರಿಗಳ ವರ್ಕ್ ಇಂಡೆಂಟ್ ಸಂಖ್ಯೆಗಳು ಈ ಕೆಳಗಿನಂತೆ ಇರುತ್ತವೆ.

| ಕ್ರ.ಸಂ | ಇಂಡೆಂಟ್ ನಂಬರ | ಟೆಂಡರಿಗಿಟ್ಟ ಮೊತ್ತ |
|---|---|---|
| 01 | RDPR/2024-25/IND6197 | ರೂ. 5,94,462.10 |

ಟೆಂಡರ್ ಅರ್ಜಿಯ ಬೆಲೆ ಹಾಗೂ ಇ.ಎಂ.ಡಿ ಮೊತ್ತದ ವಿವರ : ಅರ್ಜಿ ಬೆಲೆ ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳ ಪೋರ್ಟಲ್‌ನಂತೆ ಇ.ಎಂ.ಡಿ. ಸಂಬಂಧಪಟ್ಟ ವರ್ಕ್ ಇಂಡೆಂಟ್‌ನಲ್ಲಿ ನೋಡಬಹುದಾಗಿದೆ.

ಇ-ಪ್ರೋಕ್ಯುರಮೆಂಟ್ ಮುಖಾಂತರ ಅರ್ಜಿ ಹಾಗೂ ಶೇಡ್ಯೂಲ್-ಬಿ ಯನ್ನು ವೆಬ್‌ಸೈಟ್‌ನಲ್ಲಿ ಭರ್ತಿ ಮಾಡಿ ಸಲ್ಲಿಸುವ ದಿನಾಂಕ: 12-12-2024 ರಿಂದ 20-12-2024 ರಂದು 16.00 ಗಂಟೆಯವರೆಗೆ, ತಾಂತ್ರಿಕ ಬಿಡ್ ಟೆಂಡರ್ ತೆರಯುವ ದಿನಾಂಕ : 21-12-2024 ರಂದು 11.30 ಗಂಟೆಗೆ ಹಾಗೂ ಆರ್ಥಿಕ ಬಿಡ್ ದಿನಾಂಕ: 23-12-2024 ರಂದು 11.30 ಗಂಟೆಗೆ ತೆರೆಯಲಾಗುವುದು. ಹೆಚ್ಚಿನ ಮಾಹಿತಿಗಾಗಿ ಈ ಕಛೇರಿಯ ಕೆಲಸದ ವೇಳೆಯಲ್ಲಿ ಪಡೆಯಬಹುದು.

ಸಹಿ ಆಗಿದೆ/-
**ಪಂಚಾಯತ ಅಭಿವೃದ್ಧಿ ಅಧಿಕಾರಿಗಳು**
ಗ್ರಾಮ ಪಂಚಾಯತ ಕಾರ್ಯಾಲಯ
ಕೊಣ್ಣೂರ


### ರಾಜ್ಯಮಟ್ಟದ ಹೊನಲು ಬೆಳಕಿನ ಅಟ್ಯಾಪಟ್ಯಾ ಚಾಂಪಿಯನ್‌ಶಿಪ್ ಉದ್ಘಾಟಿಸಿದ ಅಕ್ಷಯ ಐ.ಪಾಟೀಲ

# ಕ್ರೀಡೆಯಲ್ಲಿ ಏಕಾಗ್ರತೆ, ಸಮನ್ವಯತೆ ಇರಲಿ

■ ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಅಟ್ಯಾ ಪಟ್ಯಾ ಎನ್ನುವುದು ದೇಸೀ ಕ್ರೀಡೆಯಾಗಿದೆ. ಶತಮಾನಗಳಿಂದಲೂ ವಿವಿಧ ಹೆಸರುಗಳಿಂದ ಕರೆಯಲ್ಪಡುತ್ತಿರುವ ಈ ಕ್ರೀಡೆ, ಬೆಳವಣಿಗೆ ಹೊಂದುತ್ತಾ ಬಂದಿದೆ. ಸದ್ಯ ನರೇಗಲ್ಲ ಭಾಗದಲ್ಲಿ ಈ ಕ್ರೀಡೆ ಸದ್ದು ಮಾಡುತ್ತಿರುವುದು ಹೆಮ್ಮೆಯ ವಿಷಯ ಎಂದು ಕಾಂಗ್ರೆಸ್ ಯುವ ಮುಖಂಡ ಅಕ್ಷಯ ಐ.ಪಾಟೀಲ ಹೇಳಿದರು.

ಗದಗ ಜಿಲ್ಲಾ ಅಟ್ಯಾ ಪಟ್ಯಾ ಸಂಸ್ಥೆ, ನರೇಗಲ್ಲ ಪಟ್ಟಣದ ಚೈತನ್ಯ ಸ್ಪೋರ್ಟ್ಸ್ ಕ್ಲಬ್ ಸಹಯೋಗದಲ್ಲಿ ಸ್ಥಳೀಯ ಹೊಸ ಬಸ್ ನಿಲ್ದಾಣದ ಎದುರಿಗಿನ ಸರ್ಕಾರಿ ಶಾಲೆಯ ಆವರಣದಲ್ಲಿ 32ನೇ ರಾಜ್ಯಮಟ್ಟದ ಹೊನಲು ಬೆಳಕಿನ ಅಟ್ಯಾಪಟ್ಯಾ ಚಾಂಪಿಯನ್‌ಶಿಪ್‌ಗೆ ಚಾಲನೆ ನೀಡಿ ಅವರು ಮಾತನಾಡಿದರು.

ಸಾಮರ್ಥ್ಯ ಮತ್ತು ಯುಕ್ತಿ ಬಳಸಿ ಆಡುವ ಆಟ ಅಟ್ಯಾಪಟ್ಯಾ. ಈ ಕ್ರೀಡಾಕೂಟದಲ್ಲಿ ರಾಜ್ಯ ಹಾಗೂ ದೇಶವನ್ನು ಪ್ರತಿನಿಧಿಸಿದ ಅನೇಕ ಕ್ರೀಡಾಪಟುಗಳು ನರೇಗಲ್ಲ ಭಾಗದಲ್ಲಿರುವುದು



ಕಂಡು ಸಂತೋಷವಾಯಿತು. ಕ್ರೀಡೆಯಲ್ಲಿ ಏಕಾಗ್ರತೆ, ಸಮನ್ವಯತೆ ಇದ್ದಾಗ ಮಾತ್ರ ಜಯ ನಮ್ಮದಾಗಲು ಸಾಧ್ಯ. ಈ ನಿಟ್ಟಿನಲ್ಲಿ ಪ್ರತಿ ತಂಡದ ಕ್ರೀಡಾಪಟುಗಳು ಸಂಘಟನಾತ್ಮಕವಾಗಿ ಆಟವಾಡಬೇಕು, ಕ್ರೀಡಾಕೂಟ ಯಶಸ್ವಿಗೊಳಿಸಬೇಕು ಎಂದು ತಿಳಿಸಿದರು.

ವೇದಿಕೆಯ ಮೇಲೆ ಡಾ. ಎ.ಡಿ. ಸಾಮುದ್ರಿ, ನರೇಗಲ್ಲ ಶಹರ ಕಾಂಗ್ರೆಸ್ ಅಧ್ಯಕ್ಷ ಶಿವನಗೌಡ ಪಾಟೀಲ, ಗದಗ ಜಿಲ್ಲಾ ಅಟ್ಯಾ-ಪಟ್ಯಾ ಸಂಸ್ಥೆಯ ಕಾರ್ಯದರ್ಶಿ ದಡೇಸೂರಮಠ, ಮೈಲಾರಪ್ಪ ವೀ.ಚಳ್ಳಮರದ, ಅಲ್ಲಾಭಕ್ಷಿ ನದಾಫ್, ಸಂತೋಷ ಹನಮಸಾಗರ, ಸಂಜೀವ ರಡ್ಡೇರ, ಉಮೇಶ ಸಂಗನಾಳಮಠ, ಕಲ್ಮೇಶ ತೊಂಡಿಹಾಳ, ಬಸವರಾಜ ವಂಕಲಕುಂಟಿ, ಬಸವರಾಜ ಕುರಿ, ತಿಮ್ಮರೆಡ್ಡಿ ಬಂಡಿವಡ್ಡರ, ಆರ್.ಎಸ್. ನರೇಗಲ್ಲ, ಭೀಮಪ್ಪ ಪೂಜಾರ, ನಿಂಗರಾಜ ಬೇವಿನಕಟ್ಟಿ, ವಿ.ಎ. ಕುಂಬಾರ, ರಫೀಕ ರೇವಡಿಗಾರ, ಮಹಾದೇವ ಬೇವಿನಕಟ್ಟಿ ಇದ್ದರು. ಕ್ರೀಡಾಕೂಟದಲ್ಲಿ ವಿವಿಧ ಜಿಲ್ಲೆಗಳ 500ಕ್ಕೂ ಹೆಚ್ಚಿನ ಸ್ಪರ್ಧಾಳುಗಳು ಪಾಲ್ಗೊಂಡಿದ್ದರು.

ಅಟ್ಯಾಪಟ್ಯಾ ಸಂಸ್ಥೆಯ ರಾಜ್ಯ ಪ್ರಭಾರಿ ಕಾರ್ಯದರ್ಶಿ ಎಲ್.ಸಿ. ಲಮಾಣಿ ಮಾತನಾಡಿ, ಈ ಆಟ ಖೋಖೋ ಆಟವನ್ನೇ ಹೋಲುತ್ತದೆ. ಅದೇ ಅಂಕಣ ಬಳಸಿಕೊಂಡು ಆಡಬಹುದು. ಇದಕ್ಕೆ ಯಾವುದೇ ಸಲಕರಣೆಗಳ ಅಗತ್ಯವಿಲ್ಲ. ಒಂದು ಸಮತಟ್ಟಾದ ಮೈದಾನ ಇದ್ದರೆ ಸಾಕು ಎಂದರು.

ನಂತರ ನಡೆದ ಸಮಾರೋಪ ಸಮಾರಂಭದಲ್ಲಿ ಮುಖಂಡರಾದ ಮಿಥುನ ಪಾಟೀಲ, ರವೀಂದ್ರನಾಥ ದಂಡಿನ, ಶೇಕಪ್ಪ ಕೆಂಗಾರ, ಶೇಕಪ್ಪ ಜುಟ್ಟಲ, ಅಲ್ಲಾಭಕ್ಷಿ ನದಾಫ್, ಎನ್.ಕೆ. ಬೇವಿನಕಟ್ಟಿ ಮುಂತಾದವರಿದ್ದರು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka